# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 256 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28–05–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 256 | Title- Code: KARKAN 28269 | Chitradurga | Date: 28-05-2024 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮನೆಯ ಹಿರಿಯನ್ನೇ ವೃದ್ಧಾಶ್ರಮಕ್ಕೆ ಬಿಡುವುದು ಬೇಸರ ಸಂಗತಿ: ಪುತ್ತೂರ್ಕರ್ 2

ಹೊಸದುರ್ಗ: ಜಮೀನು ಉಳುಮೆಗೆ ಮುರಿ ಬಿದ್ದ ಅನ್ನದಾತ 3

ಮಹಾತ್ಮ ಗಾಂಧಿ ಬಾಬಾ ಸಾಹೇಬ್ ಅಂಬೇಡ್ಕರ್ ವಿಶ್ವ ಗುರು ಭಾರತ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಅಧಿಕಾರಿಗಳ ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಸೂಚನೆ

# ವಸತಿ ನಿಲಯಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಿ

» **ಚಿತ್ರದುರ್ಗ**

ಜಿಲ್ಲೆಯ ವಸತಿ ನಿಲಯಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾಗಳು ಸುಸ್ಥಿತಿಯಲ್ಲಿರಬೇಕು. ಒಂದು ವೇಳೆ ಸಿಸಿ ಕ್ಯಾಮೆರಾಗಳು ದುರಸ್ಥಿ ಇದ್ದರೆ ಅದನ್ನು ಕೂಡಲೇ ಸರಿಪಡಿಸಿಕೊಂಡು ಚಾಲನೆಯಲ್ಲಿಟ್ಟಿರಬೇಕು. ಮಹಿಳಾ ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿ ಸುರಕ್ಷತಾ ಕ್ರಮಗಳನ್ನು ಅನುಸರಿಸುವುದರ ಜೊತೆಗೆ 24*7 ಕಾವಲುಗಾರರನ್ನು ನೇಮಿಸಬೇಕು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಈಚೆಗೆ ಜಿಲ್ಲೆಯಲ್ಲಿರುವ ವಸತಿ ನಿಲಯಗಳ ಮೂಲಭೂತ ಸೌಕರ್ಯಗಳು ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯ ಬಗ್ಗೆ ಜಿಲ್ಲಾಮಟ್ಟದ ವಸತಿ ನಿಲಯಗಳ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿರುವ ಎಲ್ಲಾ ವಸತಿನಿಲಯಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯನಿರ್ವಹಿಸುತ್ತಿರುವ ಬಗ್ಗೆ



ಖಚಿತಪಡಿಸಿಕೊಂಡು, ವಸತಿ ನಿಲಯದ ವಿದ್ಯಾರ್ಥಿಗಳಿಗೆ ಶುದ್ಧನೀರನ್ನು ಒದಗಿಸಬೇಕು. ವಸತಿ ನಿಲಯಗಳಲ್ಲಿರುವ ಶೌಚಾಲಯವು ಶುಚಿತ್ವದಿಂದ ಕೂಡಿರಬೇಕು ಎಂದು ಸೂಚನೆ ನೀಡಿದರು.

ಆಹಾರದ ಮೆನು ಪ್ರಕಾರ ತಾಜಾ ತರಕಾರಿಗಳನ್ನು ಹಾಕಿ, ಉತ್ತಮ ಗುಣಮಟ್ಟದ ಆಹಾರವನ್ನು ಶುಚಿ ಮತ್ತು ರುಚಿಯಾಗಿ ಸಿದ್ದಪಡಿಸಿ ಕೊಡಬೇಕು. ಆಹಾರ ತಯಾರಿಸುವಾಗ ಅಡುಗೆ ಮಾಡುವವರು ಸುರಕ್ಷಿತ ಉಡುಪುಗಳನ್ನು ಧರಿಸಿ ಆಹಾರ ತಯಾರಿಸಬೇಕು. ಶುಚಿ ಸಂಭ್ರಮದ ಬಗ್ಗೆ ವಾರ್ಡ್‌ನ್‌ಗಳು ಖಾತ್ರಿ ಪಡಿಸಿಕೊಳ್ಳಬೇಕು. ದೂರು ಪೆಟ್ಟಿಗೆ ಹಾಗೂ ದೂರು ರಿಜಿಸ್ಟರ್‌ಗಳನ್ನು ವಸತಿ ನಿಲಯಗಳಲ್ಲಿ ಕಡ್ಡಾಯವಾಗಿ ಇಟ್ಟಿರಬೇಕು ಹಾಗೂ ಅವುಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಲು ಸೂಚಿಸಿದರು.

ಊಟದ ಸಮಯದಲ್ಲಿ ವಸತಿ ನಿಲಯದ ಮೇಲ್ವಿಚಾರಕರು ಕಡ್ಡಾಯವಾಗಿ ಹಾಜರಿದ್ದು, ಮೇಲ್ವಿಚಾರಣೆ ಮಾಡಬೇಕು. ಪ್ರೌಢ ಮತ್ತು ಪದವಿಪೂರ್ವ ಶಾಲೆ ಮತ್ತು ಕಾಲೇಜುಗಳಿಗೆ ವಾರ್ಡ್‌ನ್‌ಗಳು ಭೇಟಿ ನೀಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯನ್ನು ಪಡೆದುಕೊಂಡು ಪೋಷಕರ ಸಭೆಗಳನ್ನು ಕಾಲಕಾಲಕ್ಕೆ ಕರೆದು ಪ್ರಗತಿ ವರದಿಯನ್ನು ನೀಡಬೇಕು. ಮೂಲಭೂತ ಸೌಕರ್ಯಗಳ ಬಗ್ಗೆ ಮೇಲ್ವಿಚಾರಕರು ಹೆಚ್ಚಿನ ಗಮನವಿರುವಂತೆ ನೋಡಿಕೊಳ್ಳಬೇಕು. ವಿದ್ಯಾರ್ಥಿಗಳ ಕುಂದು–ಕೊರತೆಗಳ ಸಭೆ ಮಾಡಬೇಕು ಎಂದು ತಾಕೀತು ಮಾಡಿದರು.

ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು ಅನಿರೀಕ್ಷಿತ ಭೇಟಿ ನೀಡಿ, ವಸತಿ ನಿಲಯಗಳ ಮತ್ತು ವಿದ್ಯಾರ್ಥಿಗಳ ಬಗ್ಗೆ ಮಾಹಿತಿ ಪಡೆದು, ಪರಿಶೀಲಿಸಿ ವರದಿ ನೀಡಬೇಕು. ವಸತಿ ನಿಲಯಗಳನ್ನು ಉತ್ತಮವಾಗಿ, ಸಮರ್ಪಕವಾಗಿ ಕಾರ್ಯನಿರ್ವಹಿಸಲು ಸಂಬಂಧಿಸಿದ ಜಿಲ್ಲಾಮಟ್ಟದ ಅಧಿಕಾರಿಗಳು ಈ ವಸತಿ ನಿಲಯಗಳು ಜಿಲ್ಲೆಯಲ್ಲಿ ಮಾದರಿಯಾಗಲು ಶ್ರಮಪಟ್ಟು ಕೆಲಸ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಸುಬ್ರನಾಯ್ಕ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕಾಂತರಾಜ್ ಇದ್ದರು.

## ಫಾಸ್ಟ್ ನ್ಯೂಸ್

### ಮೇ.28ರಂದು ಸಮಗ್ರ ಪೋಷಕಾಂಶ ನಿರ್ವಹಣೆ ಕುರಿತು ತರಬೇತಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಮೇ.28ರಂದು ಬೆಳಿಗ್ಗೆ 10ಕ್ಕೆ ಜಿಲ್ಲೆಯ ರೈತರಿಗೆ “ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಸಮಗ್ರ ಪೋಷಕಾಂಶಗಳ ನಿರ್ವಹಣೆ” ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಬಬ್ಬೂರುಫಾರಂ ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಡಾ.ಡಿ.ರವಿಕುಮಾರ್ ಅವರು ಮಣ್ಣು ಮತ್ತು ನೀರು ಪರೀಕ್ಷೆ ಮಹತ್ವ, ಮಣ್ಣು ಮತ್ತು ನೀರು ಮಾದರಿ ತೆಗೆಯುವ ವಿಧಾನ, ಮಣ್ಣು ಪರೀಕ್ಷೆ ಆಧಾರಿತ ಪೋಷಕಾಂಶಗಳ ಶಿಫಾರಸ್ಸು, ಪ್ರಮುಖ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಪೋಷಕಾಂಶಗಳ ಕೊರತೆಯ ಲಕ್ಷಣ ಮತ್ತು ಅವುಗಳ ಸಮಗ್ರ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡುವರು. ಆಸಕ್ತ 50 ಜನ ರೈತಭಾಂದವರು ತರಬೇತಿಯಲ್ಲಿ ಭಾಗವಹಿಸಲು ರಜನೀಕಾಂತ. ಆರ್, ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿಕೇಂದ್ರ, ಬಬ್ಬೂರು ಫಾರಂ (9980642458), ಉಷಾರಾಣಿ ಎಂ., ಸಹಾಯಕ ಕೃಷಿ ನಿರ್ದೇಶಕರು (ರೈ.ಮ) (9980730696), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (9845249832) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂ. ಸಂಖ್ಯೆಗೆ ಕರೆ ಮಾಡಿ ತಮ್ಮ ಫ್ರೂಟ್ಸ್ ಐಡಿಯೊಂದಿಗೆ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಹಾಗೂ ತರಬೇತಿಗೆ ಹಾಜರಾಗುವ ರೈತಬಾಂಧವರು ತಮ್ಮ ಫ್ರೂಟ್ಸ್‌ಐಡಿಯನ್ನು (FID) ಕಡ್ಡಾಯವಾಗಿ ತರಲು ಕೋರಿದೆ. ರಾಜ್ಯದ ವಿವಿಧ ಭಾಗಗಳ ಆಸಕ್ತ ರೈತ ಬಾಂಧವರು ಕೃಷಿ ಮತ್ತು ಕೃಷಿ ಸಂಬಂಧಿತ ವಿಷಯಗಳ ಕುರಿತು ಗೂಗಲ್ ಮೀಟ್ ಮೂಲಕ ಆಯೋಜಿಸಲಾಗುವ ವಿವಿಧ ತರಬೇತಿಗಳಿಗೆ ಹಾಜರಾಗಲು ಮಾಹಿತಿಗಾಗಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಫೇಸ್‌ಬುಕ್ ಸೇರಲು ತಮ್ಮ ಫೇಸ್‌ಬುಕ್‌ಖಾತೆಯಿಂದ DatcBabbur ಎಂದು ಹುಡುಕಿ add friend ಬಟನ್‌ಒತ್ತಿ ಫೇಸ್‌ಬುಕ್ ಸೇರಬಹುದಾಗಿದೆ.

### ಬಡ್ಡಿದರ ನಿಗಧಿ

» **ಚಿತ್ರದುರ್ಗ**

ಲೇವಾದೇವಿ ಗಿರವಿ ಹಾಗೂ ಹಣಕಾಸು ಸಂಸ್ಥೆಗಳು ಕರ್ನಾಟಕ ಲೇವಾದೇವಿಗಾರರ ಅಧಿನಿಯಮ 1961ರ ಪ್ರಕರಣ 28ರಡಿ ಸರ್ಕಾರವು ಬಡ್ಡಿದರ ನಿಗಧಿಪಡಿಸಿದೆ. ಸರ್ಕಾರವು ಬಡ್ಡಿದರ ನಿಗಧಿಪಡಿಸಿರುವ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಲೈಸೆನ್ಸ್ ಪಡೆದ ಲೇವಾದೇವಿ ಹಾಗೂ ಗಿರವಿದಾರರ ಅಂಗಡಿಯಲ್ಲಿ ಸಾರ್ವಜನಿಕರ ಹಿತದೃಷ್ಟಿಗೆ ಸುಲಭವಾಗಿ ಕಾಣುವಂತೆ ಬಡ್ಡಿದರ ವಿಧಿಸುವ ನಾಮಫಲಕಗಳನ್ನು ನಗದು ಕೌಂಟರ್ ಹತ್ತಿರ ದಪ್ಪ ಅಕ್ಷರಗಳಲ್ಲಿ ಮುದ್ರಿಸಿ ಪ್ರದರ್ಶಿಸಬೇಕು. ಭದ್ರತೆ ಇರುವ ಸಾಲಗಳಿಗೆ ಗರಿಷ್ಟ ವಾರ್ಷಿಕ ಶೇ.14 ಹಾಗೂ ಭದ್ರತೆ ಇಲ್ಲದ ಸಾಲಗಳಿಗೆ ಗರಿಷ್ಟ ವಾರ್ಷಿಕ ಶೇ.16 ಮಾತ್ರ ವಿಧಿಸಬೇಕಾಗಿರುತ್ತದೆ. ಈ ದರಗಳಿಗಿಂತ ಮಿತಿ ಮೀರಿದ ಬಡ್ಡಿ ವಿಧಿಸಿ ಸಾಲಗಾರರಿಗೆ ಕಿರುಕುಳ ನೀಡುತ್ತಿದ್ದಲ್ಲಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಹಾಗೂ ಗಿರವಿ ಲೇವಾದೇವಿ ಸಹಾಯಕ ನಿಬಂಧಕರು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ ಮತ್ತು ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ಗಿರವಿ ಲೇವಾದೇವಿ ಉಪ ನಿಬಂಧಕರು, ಚಿತ್ರದುರ್ಗ ಇವರಿಗೆ ದೂರು ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.



# ವಿಪಕ್ಷ ಟೀಕೆಗೆಲ್ಲಾ ತಲೆಕೆಡಿಸಿಕೊಳ್ಳುವುದಿಲ್ಲ

» **ಚಿತ್ರದುರ್ಗ**

ಮಕ್ಕಳ ಭವಿಷ್ಯದ ದೃಷ್ಟಿಯಿಂದ ಶಿಕ್ಷಣ ಇಲಾಖೆಯಲ್ಲಿ ಕೆಲವೊಂದು ತೀರ್ಮಾನಗಳನ್ನು ತೆಗೆದುಕೊಂಡಿದ್ದೇವೆ. ವಿರೋಧ ಪಕ್ಷಗಳ ಟೀಕೆಗಳಿಗೆಲ್ಲಾ ತಲೆಕೆಡಿಸಿಕೊಳ್ಳುವುದಿಲ್ಲವೆಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪ ವಿರೋಧಿಗಳಿಗೆ ತಿರುಗೇಟು ನೀಡಿದರು.

ದುರ್ಗದ ಸಿರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮೂರು ಪದವೀಧರ ಹಾಗೂ ಮೂರು ಆಗ್ನೇಯ ಶಿಕ್ಷಕರುಗಳ ಕ್ಷೇತ್ರಗಳಲ್ಲಿ ಸ್ಪರ್ಧಿಸಿರುವ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸುವಂತೆ ಶಿಕ್ಷಕರುಗಳಲ್ಲಿ ಮಧು ಬಂಗಾರಪ್ಪ ಮನವಿ ಮಾಡಿದರು.ಪಾರ್ಲಿಮೆಂಟ್ ಚುನಾವಣೆಯಲ್ಲಿಯೂ ನಮ್ಮ ಪಕ್ಷ ಹೆಚ್ಚಿನ ಸ್ಥಾನಗಳನ್ನು ಗೆಲ್ಲುವ ವಿಶ್ವಾಸವಿದೆ. ಶಿಕ್ಷಕರು, ಪದವೀಧರರಿಗೆ ಕಾಂಗ್ರೆಸ್ ಸರ್ಕಾರ ಯುವ ನಿಧಿ ಗ್ಯಾರೆಂಟಿಗಳನ್ನು ನೀಡಿದೆ. ಓ.ಪಿ.ಎಸ್.ನಮ್ಮ ಪ್ರಣಾಳಿಕೆಯಲ್ಲಿದೆ. ಮುಂದಿನ ದಿನಗಳಲ್ಲಿ



ಈಡೇರಿಸುತ್ತೇವೆ. ಕಳೆದ ಫೆಬ್ರವರಿ, ಮಾರ್ಚ್‌ನಲ್ಲಿ ಹನ್ನೆರಡು ಸಾವಿರ ಶಿಕ್ಷಕರುಗಳನ್ನು ನೇಮಕ ಮಾಡಿಕೊಂಡಿದ್ದೇವೆ. ಮೊದಲಿನಿಂದಲೂ ಶಿಕ್ಷಣಕ್ಕೆ ಹೆಚ್ಚಿನ ಸಹಕಾರ ಕೊಡುತ್ತಿರುವುದು ಕಾಂಗ್ರೆಸ್ ಪಕ್ಷ. ಶಿಕ್ಷಕರುಗಳಿಗೆ ಗಂಭೀರವಾದ ಸಮಸ್ಯೆಗಳಿವೆ. ಹಂತ ಹಂತವಾಗಿ ಎಲ್ಲವನ್ನು ಪರಿಹರಿಸಲಾಗುವುದೆಂದು ಭರವಸೆ ನೀಡಿದರು.

ಪಠ್ಯಪುಸ್ತಕ ಪರಿಷ್ಕರಣೆಯಾಗಿ ಶುದ್ದವಾಗಿದೆ. ವಿರೋಧ ಪಕ್ಷದವರು ಬರೀ ಟೀಕೆ ಟಿಪ್ಪಣಿಗಳನ್ನು ಮಾಡಿಕೊಂಡು ಕಾಲ ಕಳೆಯುವುದರಲ್ಲಿ ಅರ್ಥವಿಲ್ಲ.ಅಭಿವೃದ್ದಿಗಾಗಿಆಡಳಿತಪಕ್ಷದೊಂದಿಗೆ ಕೈಜೋಡಿಸುವುದನ್ನು ಕಲಿಯಬೇಕು. ಅನುದಾನಿತ ಶಾಲೆಗಳನ್ನು ಮುಚ್ಚುವುದಿಲ್ಲ ಎಂದು ಹೇಳಿದರು.ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಡಿ.ಟಿ.ಶ್ರೀನಿವಾಸ್‌ರವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಿ ವಿಧಾನಪರಿಷತ್‌ಗೆ ಕಳಿಸಿಕೊಡಿ ನಿಮ್ಮ ಸಮಸ್ಯೆಗಳಿಗೆ ಧ್ವನಿಯಾಗಿರುತ್ತಾರೆಂದು ಶಿಕ್ಷಕರುಗಳಲ್ಲಿ ಮನವಿ ಮಾಡಿದರು.

ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಶಾಸಕಿ ಶ್ರೀಮತಿ ಪೂರ್ಣಿಮ ಶ್ರೀನಿವಾಸ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಉಪಸ್ಥಿತರಿದ್ದರು.

## ಗಿಡಮೂಲಿಕೆ ಸೊಪ್ಪು ತಿಂದು ಪ್ರಾಣ ಕಳೆದುಕೊಂಡ ಯುವತಿ

» **ಚಳ್ಳಕೆರೆ**

ಸಾರ್ವಜನಿಕ ಆರೋಗ್ಯ ಸುಧಾರಣೆಗೆ ಸರ್ಕಾರ ಹಲವಾರು ರೀತಿಯ ನೂತನ ಔಷಧಗಳನ್ನು ಕಂಡುಹಿಡಿದು ಜಾರಿಗೆ ತಂದಿದ್ದರೂ ಇನ್ನೂ ಜನರು ಗಿಡಮೂಲಿಕೆ ಪದ್ದತಿಗೆ ಮಾರುಹೋಗಿರುವುದು ವಿಷಾದನೀಯ ಸಂಗತಿ. ಇಂತಹ ಗುಡಮೂಲಿಗೆಯ ಹಸಿರುಸೊಪ್ಪು ತಿಂದು ಯುವತಿಯೊಬ್ಬಳು ಮೃತಪಟ್ಟ ಘಟನೆ ವರದಿಯಾಗಿದೆ.

ಹಿರಿಯೂರು ತಾಲ್ಲೂಕಿನ ರಂಗೇನಹಳ್ಳಿ ಗ್ರಾಮದ ಶ್ವೇತ(20) ಎಂಬ ಯುವತಿ ಗ್ರಾಮಕ್ಕೆ ಹತ್ತಿರುವ ವಿರುವ ಚಳ್ಳಕೆರೆ ತಾಲ್ಲೂಕಿನ ಗೊರ್ಲತ್ತು ಗ್ರಾಮಕ್ಕೆ ಆಗಮಿಸಿ ನನಗೆ ಧೀರ್ಘಕಾಲದಿಂದ ಜ್ವರಭಾದಿಸುತ್ತಿದ್ದು, ಜ್ವರ ನಿಯಂತ್ರಣಕ್ಕೆ ಹಸಿರು ಸೊಪ್ಪು ಸೇವನೆ ಮಾಡುವಂತೆ ತಿಳಿಸಿದ ಹಿನ್ನೆಲೆಯಲ್ಲಿ ತಾಯಿ ರತ್ನಮ್ಮಳೊಂದಿಗೆ ಆಗಮಿಸಿ ಹಸಿರು ಸೊಪ್ಪು ಸೇವಿಸಿದ್ದಾಳೆ. ನಂತರ ಆರೋಗ್ಯದಲ್ಲಿ ದಿಢೀರನೆ ಏರುಪೇರು ಕಾಣಿಸಿದೆ ಅವಳನ್ನು ಚಳ್ಳಕೆರೆ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗೆ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿರುತ್ತದೆ. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಆಕೆ ಮೃತಪಟ್ಟಿರುತ್ತಾಳೆ. ಠಾಣಾಧಿಕಾರಿ ರಂಗನಾಥ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

**ಪ್ರಮುಖ ಸುದ್ದಿ**

# ನೂತನ ಸಿವಿಲ್ ಹಿರಿಯ ನ್ಯಾ. ಶಮೀರ್ ಪೀರ್‌ಸಾಬ್ ನಂದ್ಯಾಲ, ಜೆಎಂಎಫ್‌ಸಿ ನ್ಯಾ. ತೇಜಸ್ವಿನಿ ಅಧಿಕಾರ ಸ್ವೀಕಾರ

» **ಚಳ್ಳಕೆರೆ**

ಇತ್ತೀಚಿನ ವರ್ಷಗಳಲ್ಲಿ ನ್ಯಾಯಾಲಯಗಳ ಮೇಲೆ ಸಾರ್ವಜನಿಕರ ಗೌರವ, ವಿಶ್ವಾಸ, ಮೌಲ್ಯ ಹೆಚ್ಚಾಗುತ್ತಿದೆ. ಕಾರಣ, ಯಾವುದನ್ನು ನಿಯಂತ್ರಿಸಲಾಗದೆ ಹೋದಂತ ಸಂದರ್ಭದಲ್ಲಿ ಈ ದೇಶದ ಕಾನೂನು ಅದನ್ನು ನಿಯಂತ್ರಿಸಲು ಸಾಧ್ಯವಾಗಿದೆ.ಆದ್ದರಿಂದನ್ಯಾಯಾಲಯದ ಕಾರ್ಯಕಲಾಪಗಳಿಂದ ಸಮಾಜದಲ್ಲಿ ಹೆಚ್ಚಿನ ಬದಲಾವಣೆಗಳು ಆಗುತ್ತಿವೆ ಎಂದು ನೂತನ ಸಿವಿಲ್ ಹಿರಿಯ ನ್ಯಾಯಾಧೀಶ ಶಮೀರ್ ಪೀರ್ ಸಾಬ್ ನಂದ್ಯಾಲ ತಿಳಿಸಿದರು.

ಅವರು, ಸೋಮವಾರ ವಕೀಲರ ಭವನದಲ್ಲಿತಾಲ್ಲೂಕುವಕೀಲರಸಂಘದಿಂದ ಹಮ್ಮಿಕೊಂಡಿದ್ದ ಸ್ವಾಗತ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ನ್ಯಾಯಾಧೀಶರು ನ್ಯಾಯಪೀಠದಲ್ಲಿ ಕಾನೂನುಗಳಡಿಯಲ್ಲೇ ಪ್ರತಿಯೊಂದು ಪ್ರಕರಣವನ್ನು ನೋಡಬೇಕಿದೆ. ಯಾವುದೇ ರೀತಿಯ ಒತ್ತಡವಿಲ್ಲದೆ ಕೆಲಸ ಮಾಡುವ ನ್ಯಾಯಾಧೀಶರ ಬಗ್ಗೆ ಸಾರ್ವಜನಿಕರಿಗೆ ಅಪಾರವಾದ ಗೌರವವಿದೆ. ವಕೀಲರೂ ಸಹ ಈ ನಿಟ್ಟಿನಲ್ಲಿ



ನ್ಯಾಯಾಲಯದ ಕಾರ್ಯಕಲಾಪದಲ್ಲಿ ಪೂರ್ಣಪ್ರಮಾಣದಲ್ಲಿ ಭಾಗವಹಿಸಿ ಕಾನೂನಡಿಯಲ್ಲೇ ಕಕ್ಷಿದಾರರಿಗೆ ಸೂಕ್ತ ನ್ಯಾಯವನ್ನು ದೊರಕಿಸಿಕೊಡುವ ನಿಟ್ಟಿನಲ್ಲಿ ಯಶಸ್ವಿಯಾಗಿ ಎಂದು ಶುಭಹಾರೈಸುವುದಾಗಿ ತಿಳಿಸಿದರು.

ನೂತನ ಜೆಎಂಎಫ್‌ಸಿ ನ್ಯಾಯಾಧೀಶೆ ಕೆ.ಎಂ.ತೇಜಸ್ವಿನಿ ಮಾತನಾಡಿ, ತಾಲ್ಲೂಕು ವಕೀಲರ ಸಂಘ ಕ್ರಿಯಾಶೀಲತೆಯಿಂದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಮಾಹಿತಿ ಪಡೆದಿದ್ದೇನೆ. ಇಲ್ಲಿಗೆ ವರ್ಗಾವಾಗಿ ಬಂದ ನಂತರ ತಾವೆಲ್ಲರೂ ನಮಗೆ ಹೃದಯಸ್ಪರ್ಶಿ ಸ್ವಾಗತಕೋರಿದ್ದೀರ, ನ್ಯಾಯಾಲಯದ ಕಲಾಪಗಳು ಎಲ್ಲರ ನಿರೀಕ್ಷೆಯಂತೆ ಉತ್ತಮವಾಗಿ ನಡೆಯಬೇಕಿದೆ. ಬಾಕಿ ಉಳಿದಿರುವ ಹಲವಾರು ಕಡಿತಗಳನ್ನು ವಿಲೇವಾರಿ ಮಾಡಬೇಕಿದೆ. ವಕೀಲರು ನ್ಯಾಯಾಲಯ ಕಲಾಪಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ವಕೀಲರ ಹುದ್ದೆಗೆ ತನ್ನದೇಯಾದ ವಿಶೇಷ ಘನತೆ ಇದೆ ಎಂದರು.

ಅಪರಸಿವಿಲ್ ನ್ಯಾಯಾಧೀಶೆ ಎಚ್.ಆರ್.ಹೇಮಾ, ನ್ಯಾಯಾಧೀಶರೊಂದಿಗೆ ವಕೀಲರು ಉತ್ತಮ ಸಹಕಾರ ನೀಡಿದರೆ ಮಾತ್ರ ಕಕ್ಷಿದಾರರಿಗೆ ಕಡಿಮೆ ಅವಧಿಯಲ್ಲಿ ನ್ಯಾಯವನ್ನು ಒದಗಿಸಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ಮಾತನಾಡಿ, ಇಲ್ಲಿನ ಸಿವಿಲ್ ಹಿರಿಯ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸಿದ ರೇಷ್ಮಕಲಕಪ್ಪಗೋಣಿ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶ ಗೌಡಜಗದೀಶ್‌ರುದ್ರೆ ಸಹ ನ್ಯಾಯಾಲಯದ ಕಾರ್ಯಕಲಾಪಗಳ ಬಗ್ಗೆ ಹಲವಾರು ಮಾರ್ಗದರ್ಶನಗಳನ್ನು ನಮಗೆ ನೀಡಿದ್ದಾರೆ. ಇಂದು ಸಹ ನಮಗೆ ಅಪಾರವಾದ ಅನುಭವವಿರುವ ಇಬ್ಬರು ನ್ಯಾಯಾಧೀಶರು ಆಗಮಿಸಿದ್ದಾರೆ. ನ್ಯಾಯಾಲಯದ ಕಲಾಪಗಳ ಬಗ್ಗೆ ಅಪಾರವಾದವಿಶ್ವಾಸ ಹೊಂದಿದ್ದಾರೆ. ಅವರ ವಿಶ್ವಾಸಕ್ಕೆ ಚ್ಯುತಿಯಾಗದಂತೆ ಕಾರ್ಯನಿರ್ವಹಿಸುವ ಭರವಸೆ ನೀಡಿದರು.

ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಎಂ.ಸಿದ್ದರಾಜು, ಸಹಕಾರ್ಯದರ್ಶಿ ಎ.ರಾಮಕೃಷ್ಣ, ಖಜಾಂಚಿ ಟಿ.ರುದ್ರಯ್ಯ, ಎನ್.ಬೀರಪ್ಪ, ಆರ್.ಪಿ.ತಿಪ್ಪೇಸ್ವಾಮಿ, ಹನುಮಂತರಾಯ, ಬೋರಯ್ಯ, ದೊರೆನಾಗರಾಜು, ಸಣ್ಣಬೋರನಾಯಕ, ಮಧುಮತಿ, ಬಿ.ಟಿ.ಶ್ಯಾಮಲ, ಎಂ.ಎಸ್.ಜಗದೀಶ್‌ನಾಯಕ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಪಾಲಿಕೆಯ ವಲಯ ಕಚೇರಿಗಳಿಗೆ ವಾರ್ಡ್ ಸ್ಥಳಾಂತರ

» ದಾವಣಗೆರೆ

ಸಾರ್ವಜನಿಕರಿಗೆ ಅನುಕೂಲವಾಗುವ ಹಿತದೃಷ್ಟಿಯಿಂದ ಹಾಗೂ ಮಹಾನಗರ ಪಾಲಿಕೆಯ ಸುಗಮ ಆಡಳಿತ ಹಿತದೃಷ್ಟಿಯಿಂದ ದಾವಣಗೆರೆ ಮಹಾನಗರಪಾಲಿಕೆಯ ವಲಯ ಕಚೇರಿಗೆ ಸಂಬಂಧಿಸಿದಂತೆ ಕೆಲವು ವಾರ್ಡ್‌ಗಳನ್ನು ಸ್ಥಳಾಂತರ ಮಾಡಲಾಗಿದೆ.ಸ್ಥಳಾಂತರಗೊಳಿಸಿದ ವಿವರ:– ವಲಯ ಕಚೇರಿ–02 ರಲ್ಲಿದ್ದ ವಾರ್ಡ್ ನಂ– 18, 19 ಮತ್ತು 20 ನ್ನು ವಲಯ ಕಚೇರಿ–1ಕ್ಕೆ ಸ್ಥಳಾಂತರಿಸಲಾಗಿದೆ. ವಲಯ ಕಚೇರಿ– 03 ರಲ್ಲಿದ್ದ ವಾರ್ಡ್ ನಂ–31 ಮತ್ತು 41 ನ್ನು ವಲಯ ಕಚೇರಿ–2 ಕ್ಕೆ ಸ್ಥಳಾಂತರಗೊಳಿಸಲಾಗಿದೆ ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

### ಮುಂಗಾರು ಮಳೆ: ಮೀನು ಹಿಡಿಯುವುದು ನಿಷೇಧ

» ದಾವಣಗೆರೆ

ಮುಂಗಾರು ಮಳೆಗಾಲದ ಅವಧಿಯಲ್ಲಿ ಜೂನ್.1 ರಿಂದ ಜುಲೈ 31 ರವರೆಗೆ ಚನ್ನಗಿರಿ ತಾಲ್ಲೂಕು ಶಾಂತಿಸಾಗರ ಜಲಾಶಯದಲ್ಲಿ ಮೀನು ಹಿಡಿಯುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಮಳೆಗಾಲದ ಅವಧಿಯಲ್ಲಿ ಮೀನುಗಳು ವಂಶಾಭಿವೃದ್ಧಿ ಚಟುವಟಿಕೆ ನಡೆಸುವುದರಿಂದ ರಾಜ್ಯದ ಎಲ್ಲಾ ಸರ್ವಋತು ಕೆರೆಗಳು, ಜಲಾಶಯಗಳು, ತೊರೆಗಳು ಮತ್ತು ನದಿಗಳಲ್ಲಿ ಮೀನು ಹಿಡಿಯುವುದನ್ನು ಸಂಪೂರ್ಣವಾಗಿ ನಿಷೇಧಿಸಿದ್ದು, ಈ ನಿಷೇಧವನ್ನು ಉಲ್ಲಂಘಿಸಿ ಮೀನು ಹಿಡುವಳಿ ಮಾಡಿದ್ದಲ್ಲಿ ನಿಯಮಾನುಸಾರ ಕಾನೂನು ಜರುಗಿಸಲಾಗುವುದೆಂದು ಶಾಂತಿಸಾಗರದ ಮೀನುಮರಿಪಾಲನ ಕೇಂದ್ರದ ಮೀನುಗಾರಿಕೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಹೈನುಗಾರಿಕೆ ತರಬೇತಿ

» ದಾವಣಗೆರೆ

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಆಧುನಿಕ ಹೈನುಗಾರಿಕೆ ತರಬೇತಿಯನ್ನು ಮೇ.29 ಮತ್ತು 30 ರಂದು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ನಾಟಿಗೆ ಯೋಗ್ಯವಾದ ತೆಂಗು, ಅಡಿಕೆ ಸಸಿ ಲಭ್ಯ

» ದಾವಣಗೆರೆ

ದಾವಣಗೆರೆ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಆವರಗೊಳ್ಳ, ಬುಳ್ಳಾಪುರ, ವ್ಯಾಸಗೊಂಡನಹಳ್ಳಿ, ಗರಗ, ಬೇಲಿಮಲ್ಲೂರು, ಕಡರನಾಯಕನಹಳ್ಳಿ ಹಾಗೂ ಎಕ್ಕೆಗೊಂದಿ ತೋಟಗಾರಿಕೆ ಕ್ಷೇತ್ರಗಳಲ್ಲಿ ಉತ್ತಮ ತಳಿಯ ನಾಟಿಗೆ ಯೋಗ್ಯವಾದ ತೆಂಗು, ಅಡಿಕೆ ಸಸಿಗಳು ಲಭ್ಯವಿರುತ್ತದೆ. ಆಸಕ್ತ ರೈತರು ಇಲಾಖೆ ನಿಗದಿಪಡಿಸಿದ ದರದಂತೆ ಮೇಲಿನ ಕ್ಷೇತ್ರಗಳಿಂದ ಸಸಿಗಳನ್ನು ಖರೀದಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:9591771724, 9448581142, 8296357345 ಸಂಪರ್ಕಿಸಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ರಾಘವೇಂದ್ರ ಪ್ರಸಾದ್ ತಿಳಿಸಿದ್ದಾರೆ.

### ಮಾಜಿ ಸೈನಿಕರು ವಿವರ ಸರಿಪಡಿಸಿಕೊಳ್ಳಲು ಸೂಚನೆ

» ಚಿತ್ರದುರ್ಗ

ಮಾಜಿ ಸೈನಿಕರು ಹಾಗೂ ಮಾಜಿ ಸೈನಿಕರ ಅವಲಂಬಿತರು ಸೇನಾ ಸೇವಾ ಪುಸ್ತಕದಲ್ಲಿರುವ ತಮ್ಮ ವೈಯಕ್ತಿಕ ಹೆಸರು, ಪತಿ, ಪತ್ನಿ ಹಾಗೂ ಮಕ್ಕಳ ಹೆಸರುಗಳನ್ನು ಆಧಾರ್, ಎಸ್.ಎಸ್.ಎಲ್.ಸಿ ಅಂಕ ಪಟ್ಟಿಗಳೊಂದಿಗೆ ಹೊಂದಾಣಿಕೆಯಾಗುವಂತೆ ಸರಿಪಡಿಸಿಕೊಳ್ಳಲು ಕೋರಿದೆ. ಕುಂದುಕೊರತೆಗಳಿಂದ ಶಿವಮೊಗ್ಗ ಕಚೇರಿಗೆ ಭೇಟಿ ನೀಡಲಾದ ಮಾಜಿ ಸೈನಿಕರು ಹಾಗೂ ಮಾಜಿ ಸೈನಿಕರ ಅವಲಂಬಿಲತರ ಕೆಲವು ಘಟನೆಗಳನ್ನು ಅವಲೋಕಿಸಿದಾಗ ಸೇವಾ ಪುಸ್ತಕದಲ್ಲಿ ತಮ್ಮ ಹೆಸರು, ಪತ್ನಿಯ ಹೆಸರು ಹಾಗೂ ಮಕ್ಕಳ ಹೆಸರುಗಳಲ್ಲಿ ಸಣ್ಣ ಪುಟ್ಟ ವ್ಯತ್ಯಾಸವಿದೆ. ಆದ ಕಾರಣ ಮಾಜಿ ಸೈನಿಕರ ಮರಣದ ನಂತರ ಕುಟುಂಬ ಪಿಂಚಣಿಯನ್ನು ಪಡೆಯುವಲ್ಲಿ ಹಾಗೂ ಇತರೆ ದೃಢೀಕರಣ ಪತ್ರಗಳು ಇನ್ನಿತರೆ ಸೌಲಭ್ಯಗಳನ್ನು ಪಡೆಯುವಲ್ಲಿ ವಿಳಂಬತೆಯೊಂದಿಗೆ ಸಂಕಷ್ಟವನ್ನು ಅನುಭವಿಸುತ್ತಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಶಿವಮೊಗ್ಗ, ದೂರವಾಣಿ ಸಂಖ್ಯೆ: 08182–220925 ಗೆ ಸಂಪರ್ಕಿಸಬಹುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕ, ಪ್ರೇರಣೆಯಿಂದ ನೀರಿನ ಬಗ್ಗೆ ಕಾಳಜಿ ವಹಿಸಬೇಕು: ಯೋಜನಾಧಿಕಾರಿ ಶಿವಣ್ಣ.ಎಸ್ ಕರೆ

» ಹೊಸದುರ್ಗ

ಸಾರ್ವಜನಿಕರು ಸ್ವ–ಪ್ರೇರಣೆಯಿಂದ ನೀರಿನ ಮಹತ್ವದ ಬಗ್ಗೆ ಕಾಳಜಿ ವಹಿಸಬೇಕು. ಆಗ ಮಾತ್ರ ನೀರಿನ ಸಂರಕ್ಷಣೆ ಮಾಡಲು ಸಾಧ್ಯವಿದೆ ಎಂದು ಶ್ರೀ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಯೋಜನಾಧಿಕಾರಿ ಶಿವಣ್ಣ.ಎಸ್ ತಿಳಿಸಿದರು

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಡಿಯಲ್ಲಿ ಕಂಚೀಪುರ ಗ್ರಾಮದಲ್ಲಿ ನಮ್ಮ ಊರು ನಮ್ಮ ಕೆರೆ ಕಾರ್ಯಕ್ರಮದ ಅಡಿಯಲ್ಲಿ ಕಂಚೀಪುರ ಶ್ರೀ ಕಂಚೀ ಅಲ್ಲಾಳನಾಥ ಕೆರೆಕಾಮಗಾರಿಯ ಗುದ್ದಲಿ ಪೂಜೆ ಮತ್ತು ಉದ್ಘಾಟನೆ ಮಾಡಿ ಮಾತನಾಡಿದ ಅವರು ರಾಜ್ಯದಲ್ಲಿ ಒಟ್ಟು 730 ಕೆರೆ 54 ಕೋಟಿ ಖರ್ಚು ಮಾಡಿ ಕೆರೆಯ ಹೂಳೆತ್ತುವುದು ಮತ್ತು ಕೆರೆಯ ಪುನಃಶ್ಚೇತನ ಮಾಡಲಾಗಿದೆ.ಪ್ರಸ್ತುತ ನಮ್ಮ ತಾಲ್ಲೂಕಿನ ಕಂಚೀಪುರದ ಈ ಕೆರೆಯನ್ನು ಆಯ್ಕೆ ಮಾಡಿದ್ದು ನಮ್ಮ ಊರು ನಮ್ಮ ಕೆರೆ ಹೂಳೆತ್ತುವ ಕೆಲಸ ಮಾಡುತ್ತಿದ್ದು ಜನ ಜಾನುವಾರುಗಳಿಗೆ



ಪ್ರಾಣಿ ಪಕ್ಷಿಗಳಿಗೆ ಕಿಟ್ಟದಾಳ್,ಕಗ್ಗಲಕಟ್ಟೆ,ಓ ಓ ಕಟ್ಟೆ ಸುತ್ತಮುತ್ತಲಿನ ಗ್ರಾಮದ ಕೃಷಿಗೆ 1500 ಎಕರೆ ಕೃಷಿ ಅಭಿವೃದ್ಧಿ ಆಗಲಿದೆ ಮತ್ತು ಜಮೀನಿನಲ್ಲಿರುವ ಬೋರ್ ವೇಲ್ ರಿಚಾರ್ಜ್ ಆಗಲಿದ್ದು 10000 ಕುಟುಂಗಳಿಗೆ ಅನುಕೂಲವಾಗಿದೆ. ಈ ಭಾಗದ ರೈತರು ಫಲವತ್ತಾದ ಮಣ್ಣನ್ನು ಕೃಷಿಗೆ ಉಪಯೋಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಂಚಿಪುರ ಕೆರೆ ಅಭಿವೃದ್ಧಿ ಸಮಿತಿಯ ಗೌರವ ಅಧ್ಯಕ್ಷ ಶ್ರೀ ಡಿ. ಪರಶುರಾಮಪ್ಪ ಮಾತನಾಡಿ ಸರ್ಕಾರಗಳು ಮಾಡದ ಕೆಲಸವನ್ನು ಧರ್ಮಸ್ಥಳ ಸಂಸ್ಥೆ ಮಾಡುತ್ತಿದೆ ಈ ಕಂಚೀ ಅಲ್ಲಾಳನಾಥ ಕೆರೆಗೆ ಇತಿಹಾಸವಿದ್ದು ಇದರ ಪುನಃಶ್ಚೇತನ ಮಾಡುವುದು ಒಳ್ಳೆಯ ಕೆಲಸ. ಇದರಿಂದ ಇತಿಹಾಸ ಉಳಿಯುವ ಜೊತೆಗೆ ನಮ್ಮ ಗ್ರಾಮಸ್ಥರಿಗೆ ಪೂರ್ಣ ಪ್ರಮಾಣ ಅನುಕೂಲವಾಗಲಿದೆ. ಈ ಸಂಸ್ಥೆಯಿಂದ ನಮ್ಮಗ್ರಾಮಪಂಚಾಯಿತಿ ವ್ಯಾಪ್ತಿಗೆ ಅನೇಕ ದೇವಸ್ಥಾನಗಳಿಗೆ, ಶಾಲಾ ಕಾಲೇಜುಗಳಿಗೆ ಅನುದಾನ ನೀಡಿದ ಪೂಜ್ಯ ವಿರೇಂದ್ರ ಹೆಗ್ಗಡೆಯವರ ಸಮಾಜ ಮುಖಿ ಕೆಲಸಗಳಿಗೆ ಶ್ಲಾಘನೀಯವಾಗಿದೆ.ಈ ಕೆರೆ ಪುನಃಶ್ಚೇತನ ಕೆಲಸದಲ್ಲಿ ಭಾಗಿಯಾಗಿರುವುದು ನನ್ನ ಪುಣ್ಯದ ಕೆಲಸ ಎಂದು ತಿಳಿಸಿದರು.

ನಮ್ಮ ಊರು ನಮ್ಮ ಕೆರೆ ಅಧ್ಯಕ್ಷ ಕೆ.ವಿ ಸುರೇಶ್ ಮಾತನಾಡಿ ನಮ್ಮ ಊರು ನಮ್ಮ ಕೆರೆ ಸಮಿತಿಯ ಅಧ್ಯಕ್ಷರು ಮಾಡಿರುವುದು ನಮ್ಮ ಸೌಭಾಗ್ಯ, ಈ ಕೆರೆ ಕಾಮಗಾರಿ ಪೂರ್ಣ ಆಗುವವರೆಗೂ ನಾನು ನಮ್ಮ ಸಮಿತಿಯವರು ಸಹಕಾರ ಕೊಡುತ್ತೇವೆ. ಈ ಕೆರೆಯನ್ನು ಮಾದರಿ ಕೆರೆ ಮಾಡುತ್ತೇವೆ. ಧರ್ಮಸ್ಥಳದ ಧರ್ಮಾಧಿಕಾರಿಗಳ ಈ ಯೋಜನೆಯನ್ನು ಯಶಸ್ವಿಯಾಗಿ ಮಾಡಿಕೊಂಡು ಹೋಗುತ್ತೇವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಒಕ್ಕೂಟದ ಅಧ್ಯಕ್ಷರು ಶ್ರೀಮತಿ ಮಂಜುಳಾ ಮಂಜುನಾಥ್, ಸುಮಾ,ಗ್ರಾಮ ಪಂಚಾಯಿತಿ ಅಧ್ಯಕ್ಷರು ಗುರುಮೂರ್ತಿ, ಶೀಲಾ, ಪರಶುರಾಮ್ ಸೇರಿದಂತೆ ಗ್ರಾಮಸ್ಥರು ಸ್ವಸಹಾಯ ಸಂಘದ ಸದಸ್ಯರು ಹಾಜರಿದ್ದರು.

# ಮತ ಎಣಿಕೆ ಸಿಬ್ಬಂದಿಗೆ ತರಬೇತಿ

» ಚಿತ್ರದುರ್ಗ

ಲೋಕಸಭಾ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಅಂಚೆ ಮತಪತ್ರಗಳ ಮತ ಎಣಿಕೆ ಸಿಬ್ಬಂದಿಗೆ ಮೊದಲ ಹಂತದ ತರಬೇತಿ ಕಾರ್ಯಾಗಾರ ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ಕೈಗೊಳ್ಳಲಾಯಿತು.

ತರಬೇತಿ ಕಾರ್ಯಾಗಾರದಲ್ಲಿ 12 ಸಹಾಯಕ ಮತ ಎಣಿಕೆ ಅಧಿಕಾರಿಗಳು, 13 ತಂಡಗಳ ಮತ ಎಣಿಕೆ ಸಿಬ್ಬಂದಿಗೆ ತರಬೇತಿ ನಡೆಯಿತು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಂಚೆ ಮತಪತ್ರಗಳ ಮತ ಎಣಿಕೆ ಸಿಬ್ಬಂದಿಗೆ ಸೂಕ್ತ ಮಾರ್ಗದರ್ಶನ ನೀಡಿದರು. ಜಿಲ್ಲಾಮಟ್ಟದ ಮಾಸ್ಟರ್ ಟ್ರೈನರ್ ಎಸ್.ನಾಗಭೂಷಣ್ ಅವರು ಮತ ಎಣಿಕೆ ಸಿಬ್ಬಂದಿಗೆ ಸವಿವರವಾದ ತರಬೇತಿ ನಿಡಿದರು. ತರಬೇತಿಯಲ್ಲಿ ಜಿಲ್ಲಾ ತರಬೇತಿ ಮತ್ತು ನಿರ್ವಹಣಾ ಕೋಶದ ನೋಡಲ್ ಅಧಿಕಾರಿ ಜಗದೀಶ್ ಹೆಬ್ಬಳ್ಳಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ತಿಪ್ಪೇಶ್ ಹಾಗೂ ಮತ ಎಣಿಕೆ ಅಧಿಕಾರಿಗಳು, ಸಿಬ್ಬಂದಿ ಇದ್ದರು.



## ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನೆಹರುರವರ ಪುಣ್ಯಸ್ಮರಣೆ




» ಚಿತ್ರದುರ್ಗ

ದೇಶದಮೊದಲಪ್ರಧಾನಿಯಾಗಿದ್ದ ಪಂಡಿತ್ ಜವಾಹರಲಾಲ್ ನೆಹರುರವರು ಕೃಷಿ, ಶಿಕ್ಷಣ, ಕೈಗಾರಿಕೆಗೆ ಒತ್ತು ಕೊಟ್ಟಿದ್ದರು. ಕುಟುಂಬ ರಾಜಕಾರಣ ಎಂದಿಗೂ ಮಾಡಲಿಲ್ಲ. ಅವರ ನಿಧನದ ನಂತರ ಮಗಳು ಇಂದಿರಾಗಾಂಧಿ ದೇಶದ ಪ್ರಧಾನಿಯಾಗಬೇಕಾಯಿತೆಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ನೆಹರುರವರ ಪುಣ್ಯತಿಥಿ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಮಹಾತ್ಮಗಾಂಧಿ, ಮ್‌ಲಾನಾ ಅಬುಕಲಾಂ, ಸರ್ದಾರ್ ವಲ್ಲಭಭಾಯಿ ಪಟೇಲ್, ಡಾ.ಬಾಬುಜ ಗಜೀವನರಾಂ ಇವರುಗಳ ಜೊತೆ ದೇಶದ ಸ್ವಾತಂತ್ರಕ್ಕಾಗಿ ಹೋರಾಡಿದ ನೆಹರುರವರು ಎ.ಐ.ಸಿ.ಸಿ. ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ. ದೇಶ ಸಂಕಷ್ಟದಲ್ಲಿದ್ದ ಪರಿಸ್ಥಿತಿಯಲ್ಲಿ ಪಂಚವಾರ್ಷಿಕ ಯೋಜನೆಯನ್ನು ಜಾರಿಗೆ ತಂದು ಅನೇಕ ಡ್ಯಾಂಗಳನ್ನು ಕಟ್ಟಿಸಿ ಸ್ಟೀಲ್ ಪ್ಲಾಂಟ್, ಕೈಗಾರಿಕೆ ಆರಂಭಿಸಿದರು. ಮೂರು ಅವಧಿಗೆ ದೇಶದ ಪ್ರಧಾನಿಯಾಗಿದ್ದ ನೆಹರುರವರಲ್ಲಿ ದೂರದೃಷ್ಟಿಯಿತ್ತು. ನೆಹರುರವರು ಕುಟಂಬ ರಾಜಕಾರಣ ಮಾಡಿದರೆಂದು ಕೋಮುವಾದಿ ಬಿಜೆಪಿ.ಯವರು ಅಪಪ್ರಚಾರ ಮಾಡುತ್ತಿದ್ದಾರೆ. ದೇಶ ಹಾಗೂ ಪಕ್ಷವನ್ನು ಮುನ್ನಡೆಸಿಕೊಂಡು ಹೋಗಬೇಕಾದ ಅನಿವಾರ್ಯತೆ ಇದ್ದುದರಿಂದ ಇಂದಿರಾಗಾಂಧಿ ಹತ್ಯೆ ನಂತರ ಅವರ ಪುತ್ರ ರಾಜೀವ್‌ಗಾಂಧಿ ದೇಶದ ಪ್ರಧಾನಿಯಾದರು. ಈಗ ಸೋನಿಯಾ ಗಾಂಧಿ, ರಾಹುಲ್‌ಗಾಂಧಿ, ಪ್ರಿಯಾಂಕ ಗಾಂಧಿ ಇವರುಗಳು ಪಕ್ಷ ಉಳಿಸುವುದಕ್ಕಾಗಿ ಸಾರಥ್ಯ ವಹಿಸಿಕೊಂಡಿದ್ದಾರೆಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷ ಎಸ್.ಎನ್.ರವಿಕುಮಾರ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ಚಿದಾನಂದ ಮೂರ್ತಿ ಪುಣ್ಯಸ್ಮರಣೆಯಲ್ಲಿ ಭಾಗವಹಿಸಿದ್ದರು.

### ಎಚ್‌ಪಿಪಿಸಿ ಕಾಲೇಜು: ರೋವರ್ಸ್ ಅಂಡ್ ರೇಂಜರ್ಸ್ ಪದಕ ತರಬೇತಿ ಮತ್ತು ನಿಪುಣ ಪರೀಕ್ಷೆ ಶಿಬಿರ

# ವಿದ್ಯಾರ್ಥಿಗಳ ಭವಿಷ್ಯದ ಬದುಕಿಗೆ ಸುವರ್ಣಾವಕಾಶ

» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ಶಾಲಾ, ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳಿಗೆ ಸಮಾಜ ಮುಖಿ ಚಟುವಟಿಕೆಗಳಿಗೆ ಪ್ರೇರಣೆ ನೀಡಲು ಸ್ಕೌಟ್ಸ್ ಮತ್ತು ಗೈಡ್ಸ್‌ನಂತರ ಸಂಸ್ಥೆಗಳಿಂದ ಸಾಧ್ಯವಾಗಿದೆ. ವಿದ್ಯಾರ್ಥಿಗಳು ಇಂತಹ ಸಂಸ್ಥೆಗಳ ಸೇವಾ ಚಟುವಟಿಕೆಗಳಲ್ಲಿ ತೊಡಗಿಕೊಂಡು ಸಮಾಜದ ಹಿತಕ್ಕಾಗಿ ಕಾರ್ಯನಿರ್ವಹಿಸಬೇಕೆಂದು ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಬಿ.ಎಸ್.ಮಂಜುನಾಥ ತಿಳಿಸಿದರು.

ಅವರು, ಕಾಲೇಜು ಆವರಣದಲ್ಲಿ ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಚಿತ್ರದುರ್ಗ ರೋವರ್ಸ್ ರೇಂಜರ್ಸ್‌ವಿಭಾಗದಿಂದಆಯೋಜಿಸಿದ್ದರೋವರ್ಸ್ ಅಂಡ್ ರೇಂಜರ್ಸ್ ಪದಕ ತರಬೇತಿ ಮತ್ತು ನಿಪುಣ ಪರೀಕ್ಷೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಎರಡು ದಿನಗಳ ಕಾಲ ನಡೆಯುವ ಈ ನೈಪಣ್ಯತೆ ಶಿಬಿರದ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆಯುವತ್ತ ಮುಂದಾಗಬೇಕೆಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ದೈಹಿಕ ಶಿಕ್ಷಣ ನಿರ್ದೇಶಕ, ಜಿಲ್ಲಾ ನೋಡಲ್ ಅಧಿಕಾರಿ ಎಚ್.ತಿಪ್ಪೇಸ್ವಾಮಿ, ವಿದ್ಯಾರ್ಥಿಗಳು ಇಂತಹ ಶಿಬಿರಗಳಲ್ಲಿ ಪೂರ್ಣಪ್ರಮಾಣದಲ್ಲಿ ಪಾಲ್ಗೊಂಡು ಯಶಸ್ವಿಯಾದರೆ ಅವರ ಭವಿಷ್ಯದ ಬದುಕು ಉತ್ತಮವಾಗಿರುತ್ತದೆ. ಕಾರಣ, ರಾಜ್ಯಪಾಲರ ಪ್ರಮಾಣ ಪತ್ರವನ್ನು ಪಡೆಯಲು ನೀವು ಅರ್ಹರಾಗುತ್ತೀರ, ಉದ್ಯೋಗಾವಕಾಶವೂ ಸಹ ಸುಲಭವಾಗಿ ನಿಮ್ಮ ಕೈಸೇರುತ್ತದೆ ಇಂತಹ ಸುವರ್ಣಾವಕಾಶದ ಸದುಪಯೋಗ ಎಲ್ಲರಿಗೂ ದೊರೆಯಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು. ರೋವರ್ ಅಂಡ್ ರೇಂಜರ್ಸ್ ವಿಭಾಗದ ಮುಖ್ಯಸ್ಥೆ ಡಾ.ಲೀಲಾವತಿ, ಸಹಪ್ರಾಧ್ಯಾಪಕ ಡಾ.ಆರ್. ಗಂಗಾಧರ, ಪ್ರೊ.ಗಿರೀಶ್, ಜಗನ್ನಾಥ, ಜಿಲ್ಲಾ ಸಂಘಟಕ ಜಿ.ವಿ.ಪಾಟೀಲ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಹಗವಹಿಸಿದ್ದರು.



## ಪ್ರಮುಖ ಸುದ್ದಿ

# ಬದುಕಿಗೆ ಬೆಳಕಾಗಿರುವ ಮನೆಯ ಹಿರಿಯನ್ನೇ ವೃದ್ದಾಶ್ರಮಕ್ಕೆ ಬಿಡುವುದು ಬೇಸರ ಸಂಗತಿ: ಪುತ್ತೂರ್ಕರ್

» ಚಳ್ಳಕೆರೆ

ಪ್ರತಿಯೊಬ್ಬ ವ್ಯಕ್ತಿಯೂ ತನ್ನದೇಯಾದ ಬದುಕು ರೂಪಿಸಿಕೊಳ್ಳಲು ತಂದೆ, ತಾಯಿ, ಹೆಂಡತಿ, ಮಕ್ಕಳು ಹೀಗೆ ಹಲವರ ಜೊತೆಯಲ್ಲಿ ಸಹಬಾಳ್ವೆಯನ್ನು ನಡೆಸಬೇಕಾಗುತ್ತದೆ. ಕೆಲವು ಸಂದರ್ಭಗಳಲ್ಲಿ ನಾವುಗಳು ಯಾವುದೋ ಕಾರಣಕ್ಕಾಗಿ ನಮ್ಮ ಬದುಕಿಗೆ ಆಸರೆಯಾಗಿದ್ದ ನಮ್ಮ ಮನೆಯ ವೃದ್ಧರನ್ನು ವೃದ್ಧಾಶ್ರಮಕ್ಕೆ ಸೇರಿಸಿ ಅವರನ್ನು ಅನಾಥರನ್ನಾಗಿಸುತ್ತೇವೆ. ಇದು ನೋವಿನ ಸಂಗತಿ ಎಂದು ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ ಸಂಸ್ಥಾಪಕಿ ಆರ್.ದಯಾವತಿ ಪುತ್ತೂರ್ಕರ್ ತಿಳಿಸಿದರು.

ಅವರು, ಭಾನುವಾರ ಬನಶ್ರೀವೃದ್ಧಾಶ್ರಮದಲ್ಲಿ ತನುಶ್ರೀಪ್ರಕಾಶ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಅಮ್ಮಂದಿರ ದಿನಾಚರಣೆ ಹಾಗೂ ಕವಿಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ವಿಪರ್ಯಾಸವೆಂದರೆ ನಾವು ಯಾರನ್ನು ಸಂಸ್ಕೃತರು, ಜ್ಞಾನಿಗಳೆಂದು ಭಾವಿಸುತ್ತೇವೆಯೋ ಅವರೇ ಒಮ್ಮೆ ತಪ್ಪು ಹೆಜ್ಜೆ ಇಡುತ್ತಾರೆ. ಅನಾದಿಕಾಲದಿಂದಲೂ ನಾವು ಸಂಸ್ಕೃತಿ, ಸಂಸ್ಕಾರವನ್ನು ರೂಢಿಸಿಕೊಂಡು ಬದುಕಿದ್ದೇವೆ. ಇಂದಿಗೂ ಸಹ ಪ್ರತಿಯೊಬ್ಬ ಮನೆಯಲ್ಲೂ ಹಿರಿಯರು ಇದ್ದರೆ ಆ ಮನೆಗೆ ವಿಶೇಷ ಗೌರವ. ಆದರೆ, ಪ್ರಸ್ತುತ ಮನೆಯ ಹಿರಿಯರನ್ನೇ ವೃದ್ಧಾಶ್ರಮಕ್ಕೆ ಕಳಿಸುವ ಪ್ರಯತ್ನ ನಡೆಯುತ್ತಿರುವುದು ವಿಷಾದನೀಯವೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಹಿರಿಯ ವಕೀಲ, ವೇದಿಕೆಯ ಗೌರವಾಧ್ಯಕ್ಷ ಬಿ.ಕೆ.ರಹಮತ್‌ವುಲ್ಲಾ, ಕಲುಷಿತ ಸಮಾಜವನ್ನು ತಿದ್ದುವ ಪ್ರಯತ್ನ ನಿರಂತರ ಆಗಬೇಕಿದೆ. ಇಂತಹ ಸಂದರ್ಭದಲ್ಲಿ ನಮಗೆ ಸಾಹಿತ್ಯವೇ ಒಂದು ಜೀವಾಳ. ಸಾಹಿತ್ಯದಿಂದ ನಾವು ಯಾವುದೇ ಬದಲಾವಣೆಯನ್ನು ಸುಲಭವಾಗಿ ಕಾಣಬಹುದು. ಎಲ್ಲರ ಕುಟುಂಬಗಳಲ್ಲೂ ಮಾನವಿಯ ಮೌಲ್ಯಗಳಿಗೆ ಗೌರವ ನೀಡಿದಾಗ ವೃದ್ಧಾಶ್ರಮದ ಅವಶ್ಯಕತೆ ಇರುವುದಿಲ್ಲವೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಶಫೀವುಲ್ಲಾ ವಹಿಸಿದ್ದರು, ಕವಿಯತ್ರಿ ಶೋಭಾ ಮಲ್ಲಿಕಾರ್ಜುನ ವೃದ್ಧಾಶ್ರಮ ಸಂಸ್ಥಾಪಕಿ ಎಸ್. ಮಂಜುಳಮ್ಮ, ಶಿಕ್ಷಕ ರವಿಕುಮಾರ್, ಪತ್ರಕರ್ತಕೋರ್ಲಕುಂಟೆ ತಿಪ್ಪೇಸ್ವಾಮಿ, ಕೆ.ಎಸ್. ತಿಪ್ಪಮ್ಮ, ಪಗಡಲ ಬಂಡೆ ನಾಗೇಂದ್ರಪ್ಪ, ಎಂ. ಯತೀಶ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಮ್ಯಾನೇಜ್‌ಮೆಂಟ್ ತರಬೇತಿಗೆ ಅರ್ಜಿ

» ಚಿತ್ರದುರ್ಗ

ರಾಜ್ಯ ಸಹಕಾರ ಮಹಾಮಂಡಳ ವತಿಯಿಂದ ಶಿವಮೊಗ್ಗದ ವಿನೋಬನಗರದ 2ನೇ ಹಂತದಲ್ಲಿರುವ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಸಂಸ್ಥೆಯಲ್ಲಿ ಡಿಪ್ಲೊಮೋ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಈ ಸಂಸ್ಥೆಯ ಮೂಲಕ ಸಹಕಾರ ಸಂಘ ಸಂಸ್ಥೆ, ಸಹಕಾರ ಇಲಾಖೆ, ಸಹಕಾರ ಲೆಕ್ಕಪರಿಶೋಧನೆ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ, ಖಾಸಗಿ ಅಭ್ಯರ್ಥಿಗಳಿಗೆ 6 ತಿಂಗಳು (180 ದಿನಗಳ) ಅವಧಿಯ ರೆಗ್ಯೂಲರ್ ಮತ್ತು ದೂರ ಶಿಕ್ಷಣ ಮುಖಾಂತರ ಡಿಪ್ಲೊಮೋ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯನ್ನು ಪಡೆಯಲಿಚ್ಛಿಸುವ ಅರ್ಹ ಅಭ್ಯರ್ಥಿಗಳು ಜೂನ್ 15ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸಹಕಾರ ಸಂಘ, ಸಹಕಾರ ಇಲಾಖೆ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿದ್ದರೆ ಇವರುಗಳು ದೂರ ಶಿಕ್ಷಣಕ್ಕೆ ಅರ್ಜಿ ಸಲ್ಲಿಸಬಹುದು. ಅದೇ ರೀತಿಯಾಗಿ ಖಾಸಗಿ ಅಭ್ಯರ್ಥಿಗಳಾಗಿದ್ದಲ್ಲಿ ರೆಗ್ಯೂಲರ್ ತರಬೇತಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ವಯೋಮಿತಿ 16 ವರ್ಷ ದಾಟಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಶೇ.18ರಷ್ಟು ಸ್ಥಾನಗಳನ್ನು ತರಬೇತಿಗಾಗಿ ಮೀಸಲಿಡಲಾಗಿದೆ. ಕನಿಷ್ಟ ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, 2ನೇ ಹಂತ, ವಿನೋಬನಗರ, ಶಿವಮೊಗ್ಗ–577204, ದೂರವಾಣಿ ಸಂಖ್ಯೆ 0818–2248873, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್, ಚಿತ್ರದುರ್ಗ ಮೊಬೈಲ್ ಸಂಖ್ಯೆ–9663100410, ವ್ಯವಸ್ಥಾಪಕರು, ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ಚಿತ್ರದುರ್ಗ ಮೊಬೈಲ್ ಸಂಖ್ಯೆ 9980803050 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಾಗರಾಜ್ ಪಾಟೀಲ್ ತಿಳಿಸಿದ್ದಾರೆ.

## ಕೆಎಸ್‌ಬಿ ಜಾಲತಾಣ ತಾಂತ್ರಿಕದೋಷ

» ಚಿತ್ರದುರ್ಗ

ಕೇಂದ್ರೀಯ ಸೈನಿಕ ಮಂಡಳಿ (ಕೆ.ಎಸ್.ಬಿ)ಯ ಜಾಲತಾಣವು ಮೇ.10 ರಿಂದ ತಾಂತ್ರಿಕ ತೊಂದರೆಗಳಿಂದ ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲವಾದ್ದರಿಂದ, ದುರಸ್ಥಿ ಕಾರ್ಯವು ಪ್ರಗತಿಯಲ್ಲಿದೆ. ಮೇ.10ರ ನಂತರದ ದಿನಗಳಲ್ಲಿ ಕೆ.ಎಸ್.ಬಿ ಯಿಂದ ಗಣಕೀಕೃತವಾಗಿ ತಿರಸ್ಕೃತಗೊಂಡ ಅರ್ಜಿಗಳನ್ನು ಪುನಃಸ್ಥಾಪಿಸಲಾಗುವುದು ಹಾಗೂ ಈ ಸಮಯದಲ್ಲಿ ಯಾವುದೇ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದಲ್ಲಿ, ಅವರುಗಳ ಕೋರಿಕೆಯ ಮೇರೆಗೆ ಅವಕಾಶ ಕಲ್ಪಿಸಲಾಗುದು. ಇನ್ನಿತರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಬಾಕಿಯಿರುವವರು ಜಾಲತಾಣ ಪುನಃ ಸ್ಥಾಪಿತಗೊಂಡ ಕೂಡಲೇ ಎಲ್ಲಾ ನವೀಕೃತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದು ಹಾಗೂ ಈ ಕುರಿತಂತೆ ಯಾವುದೇ ಮಾಹಿತಿ ಇದ್ದಲ್ಲಿ ತಿಳಿಸಲಾಗುತ್ತದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಕಿ ಪ್ರೇಮಸಿಂಗ್ ನಿಧನ

» ಹೊಸದುರ್ಗ

ಪಟ್ಟಣದಶ್ರೀವಾಣಿವಿಲಾಸಸಂಯುಕ್ತಪ್ರೌಢಶಾಲೆಯ



ಕಾರ್ಯದರ್ಶಿಯಾಗಿ ಹಾಗೂ ಅದೇ ಶಾಲೆಯಲ್ಲಿ ಶಿಕ್ಷಕಿಯಾಗಿ ಸುಮಾರು 40 ವರ್ಗಗಳಿಂದಲೂ ಸಹ ಕರ್ತವ್ಯ ನಿರ್ವಹಿಸುತಿದ್ದ ಕೆ.ಬಿ.ಕೃಷ್ಣಾಸಿಂಗ್ ಅವರ ಪುತ್ರಿ ಪ್ರೇಮಾಸಿಂಗ್ (75) ಸೋಮವಾರ ಮುಂಜಾನೆ ನಿಧನರಾದರು. ಪ್ರೇಮಾಸಿಂಗ್ ಅವರು ಅವಿವಾಹಿತರಾಗಿದ್ದು ಪಟ್ಟಣದ ವಿನಾಯಕ ಬಡಾವಣೆಯಲ್ಲಿ ವಾಸವಾಗಿದ್ದರು ಅವರಿಗೆ ಕಳೆದ ಕೆಲವು ತಿಂಗಳುಗಳ ಹಿಂದೆ ಪಾರ್ಶುವಾಯುವಿಗೆ ತುತ್ತಾಗಿ ಆಸ್ಪತ್ರಯಲ್ಲಿ ಚಿಕಿತ್ಸೆ ಪಡೆಯುವುದರ ಜೊತೆಗೆ ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದರು,ಆದರೆ ಸೋಮವಾರ ಮುಂಜಾನೆ ತೀವ್ರ ಅನಾರೋಗ್ಯದಿಂದ ನಿಧನರಾದರು. ಮೃತರ ಅಂತ್ಯಕ್ರಿಯೆಯು ಸೋಮವಾರ ಸಂಜೆ ಪಟ್ಟಣದ ಮುಕ್ತಿಧಾಮದಲ್ಲಿ ಅಪಾರ ಬಂಧು ಬಳಗದ ನಡೆವೆ ನೆರವೇರಿತು.

## ವಿಷಜಂತು ಕಚ್ಚಿ ಸಾವು

» ಚಳ್ಳಕೆರೆ

ತಾಲ್ಲೂಕಿನ ಯಲಗಟ್ಟೆ ಗೊಲ್ಲರಹಟ್ಟಿಯ ವೀರಣ್ಣನವರ ಜಮೀನಿನಲ್ಲಿ ರೇಷ್ಮೆಬೆಳೆಗೆ ನೀರು ಕಟ್ಟುವ ಸಂದರ್ಭದಲ್ಲಿ ರಾಧಮ್ಮ(31) ಎಂಬುವವರಿಗೆ ಯಾವುದೋ ವಿಷ ಜಂತುಕಚ್ಚಿದ್ದು ಕೂಡಲೇ ಆಕೆಯನ್ನು ಇಲ್ಲಿನ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ಚಿತ್ರದುರ್ಗದ ಬಸವೇಶ್ವರ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ವೈದ್ಯರ ಸಲಹೆಯಂತೆ ಆಕೆಯನ್ನು ಬೆಂಗಳೂರಿನ ಸ್ಪರ್ಶ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೇ ಆಕೆ ಮೃತಪಟ್ಟಿರುತ್ತಾಳೆ.

# ಜಮೀನು ಉಳುಮೆಗೆ ಮುಗಿ ಬಿದ್ದ ಅನ್ನದಾತ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ: ಕಳೆದ ನಾಲ್ಕೈದು ದಿನದಿಂದ ಉತ್ತಮ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ತಾಲೂಕಿನ ಕೆಲ್ಲೋಡು ಸಮೀಪ ವೇದಾವತಿ ನದಿ ಸೇರಿದಂತೆ ತಾಲೂಕಿನ ನಾನಾ ಕಡೆಗಳಲ್ಲಿ ತುಂಬಿ ಹರಿಯುತ್ತಿರುವ ಕೆರೆ ಕಟ್ಟೆ ಹಳ್ಳ ಕೊಳ್ಳಗಳಲ್ಲಿ ಜನರು ತಂಡೋಪ ತಂಡವಾಗಿ ಬಂದು ಕಣ್ತುಂಬಿಕೊಳ್ಳುತ್ತಿದ್ದಾರೆ. ನೀರಲ್ಲಿ ಮೀನು ಶಿಕಾರಿ ಮಾಡುತ್ತಿರುವುದು ಸಾಮಾನ್ಯವಾಗಿದೆ. ಕೆಲವರು ನೀರಿನ ವಿಡಿಯೊ, ಫೋಟೊ ತೆಗೆದು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡು ಸಂಭ್ರಮಿಸುತ್ತಿದ್ದಾರೆ.



ಹೊಸದುರ್ಗ ಪಟ್ಟಣಕ್ಕೆ ನೀರುಣಿಸುವ ವೇದಾವತಿ ನದಿ ಮೈದುಂಬಿ ಹರಿಯುತ್ತಿದೆ. ಬಿಸಿಲ ಬೇಗೆಯಿಂದ ಬಳಲಿದ್ದ ಜನ–ಜಾನುವಾರುಗಳಿಗೆ ತಂಪೆರೆದಂತಾಗಿದೆ, ಕಳೆದ ವರ್ಷ ಮಳೆಯನ್ನೇ ಕಾಣದೆ ಸಂಪೂರ್ಣ ಬರಗಾಲ ನೋಡಿದ್ದ ರೈತರು ಈ ಬಾರಿ ಉತ್ತಮ ಮಳೆಯಾಗುತ್ತಿರುವುದರಿಂದ ಹರ್ಷಗೊಂಡಿದ್ದು, ಬಿತ್ತನೆಗೆ ಕೃಷಿ ಭೂಮಿಯನ್ನು ಅಣಿಗೊಳಿಸಲು ಸಜ್ಜಾಗುತ್ತಿದ್ದಾರೆ.

ಮಳೆಯಿಂದಾಗಿ ತಾಲೂಕಿನಲ್ಲಿ ಸಾಕಷ್ಟು ರಸ್ತೆಗಳೂ ಹಾಳಾಗಿವೆ, ಪಟ್ಟಣದಲ್ಲಿ ಅದೆಷ್ಟೋ ಕಡೆಗಳಲ್ಲಿ ,ಹಲವು ಬಡಾವಣೆಗಳಲ್ಲಿ ಮುಖ್ಯ ರಸ್ತೆಯ ಎರಡೂ ಬದಿಯಲ್ಲಿ ಸಮರ್ಪಕವಾದ ಚರಂಡಿ ವ್ಯವಸ್ಥೆ ಇಲ್ಲದೆ ಮಳೆ ನೀರು ಮನೆಗಳಿಗೆ ನುಗ್ಗಿ ಸಾಕಷ್ಟು ಮನೆಗಳು ಹಾಳಾಗಿವೆ,

ತಾಲ್ಲೂಕಿನ ವಿವಿಧೆಡೆ ಕಳೆದ ಎರಡು ದಿನಗಳಿಂದ ಹದ ಮಳೆಯಾಗಿದ್ದು, ಇದೀಗ ರೈತರ ನಿರೀಕ್ಷೆಗೆ ಗರಿಗೆದರಿ ರೈತರಿಗೆ ತುಸು ನೆಮ್ಮದಿ ಬಂದಂತಾಗಿದೆ. ಸದ್ಯದ ಪರುಸ್ಥಿತಿಯಲ್ಲಿ ಭೂಮಿ ಹದ ಮಾಡುವ ಸಿದ್ಧತೆಗೆ ಅನುಕೂಲವಾಗಿದೆ.

ಧೀರ್ಘ ಕಾಲದಿಂದ ಮಳೆ ಇಲ್ಲದೆ ತೆಂಗು ಹಾಗೂ ಅಡಿಕೆ ಮರದ ಗರಿಗಳೆಲ್ಲಾ ಒಣಗುತ್ತಿದ್ದವು ಗುಳ್ಳು (ತೆಂಗಿನಕಾಯಿಯಾಗುವ ಸಣ್ಣ ಪೀಚು) ಗಳೆಲ್ಲಾ ಉದುರುತ್ತಿದ್ದವು ಎಷ್ಟು ನೀರುಣಿಸಿದರೂ ಸಾಲುತ್ತಿಲ್ಲ ಎನ್ನುವಂತಹ ಪರುಸ್ಥಿತಿ ನಿರ್ಮಾಣವಾಗಿತ್ತು, ಒಂದೆರೆಡು ಸಾಕಷ್ಟು ಮೋಟಾರ್‌ಗಳು ಕೂಡ ಸುಟ್ಟಿದ್ದು ಸಾಕಷ್ಟು ಮಂದಿ ಲಕ್ಷಾಂತರ ರೂ ನಷ್ಟ ಅನುಭವಿಸಿದ್ದರು. ಬಿರು ಬಿಸಿಲಿನ ತಾಪದಿಂದ ರೈತರು ನೊಂದು ಬೆಂದು ಹೋಗಿದ್ದರು.ಪಕ್ಷಿ ಸಂಕುವಂತೂ ನೀರಿಲ್ಲದೆ ನರಕಯಾತನೆ ಅನುಭವಿಸುತಿದ್ದವು.

ತಾಲ್ಲೂಕಿನ ಬಹುತೇಕ ಭಾಗಗಳಲ್ಲಿನ ರೈತರು ನೀರಿನ ಸಮಸ್ಯೆ ಎದುರಾಗಿತ್ತು, ಸಮಯಕ್ಕೆ ಸರಿಯಾಗಿ ಹದ ಮಳೆ ಬಾರದ ಹಿನ್ನೆಲೆಯಲ್ಲಿ ಅಡಿಕೆ ಹಾಗೂ ತೆಂಗಿನ ಮರಗಳನ್ನು ಉಳಿಸಿಕೊಳ್ಳುವುದು ಸವಾಲಾಗಿ ಹೊಗಿತ್ತು, ಮುಂದಿನ ಇಳುವರಿಯೂ ಸಹ ಕುಂಠಿತವಾಗಬಹುದು ಎಂಬುದು ರೈತರ ಆತಂಕ ಬಲವಾಗಿತ್ತು. ಸದ್ಯದ ಪರುಸ್ಥಿತಿಯಲ್ಲಿ ಬಂದ ಹದ ಮಳೆಗೆ ಜಮೀನುಗಳು ಸ್ವಲ್ಪ ಮಟ್ಟಿಗಾದರೂ ಸಹಾ ಹಸಿಯಾದಂತೆ ಆಗಿವೆ, ಇರುವ ತೋಟಗಳಿಗೆ ನವ ಉಲ್ಲಾಸ ಹಾಗು ಚೈತನ್ಯ ಬಂದಂತಾಗಿದೆ, ತಾಲೂಕಿನ ಬಹುತೇಕ ಕಡೆ ರೈತರು ಭೂಮಿ ಹದ ಗೊಳಿಸುವ ಕಾರ್ಯ ಬರುಸಿನಿಂದ ನಡೆಯುತ್ತಿದೆ, ಸಾಕಷ್ಟು ರೈತರು ಇದೇ ಮಳೆಗೆ ಬಿತ್ತನೆ ಕಾರ್ಯ ಆರಂಭಿಸಲು ಯೋಜನೆ ಹಾಕಿಕೊಂಡಿರುವುದು ರೈತ ವಲಯಗಳಿಂದ ಕೇಳಿ ಬರುತ್ತಿದೆ.

# ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸುವ ಆರೋಗ್ಯ ಇಲಾಖೆಯ ಕಾರ್ಯ ಶ್ಲಾಘನೀಯ: ಜೆ.ಡಿ.ವೆಂಕಟೇಶ್

» ಚಳ್ಳಕೆರೆ

ಕಳೆದಹಲವಾರುದಶಕಗಳಿಂದಆರೋಗ್ಯಇಲಾಖೆ ಅನೇಕ ನೂತನ ಸುಧಾರಣೆ ಕ್ರಮಗಳ ಮೂಲಕ ಜನರಿಗೆ ಯಾವುದೇ ರೋಗ ವ್ಯಾಪಿಸದಂತೆ ಜಾಗೃತೆವಹಿಸುತ್ತಾ ಬಂದಿದೆ. ಕೆಲವೊಂದು ಭಯಾನಕ ರೋಗಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ ಅವರನ್ನು ಪ್ರಾಣಾಪಾಯದಿಂದ ರಕ್ಷಣೆ ಮಾಡಲಾಗುತ್ತದೆ. ಆರೋಗ್ಯ ಇಲಾಖೆಯ ಈ ಕಾರ್ಯಕ್ಕೆ ಇಲಾಖೆಯ ಎಲ್ಲಾ ಸಿಬ್ಬಂದಿ ಸಹಕಾರ ಮೂಲಕಾರಣವೆಂದು ಸಾರ್ವಜನಿಕ ಆಸ್ಪತ್ರೆಯಆಡಳಿತಾಧಿಕಾರಿ ಡಾ.ಜೆ.ಡಿ.ವೆಂಕಟೇಶ್ ತಿಳಿಸಿದರು.




ಅವರು, ಸೋಮವಾರ ಆಸ್ಪತ್ರೆ ಸಭಾಂಗಣದಲ್ಲಿ ತಾಲ್ಲೂಕು ಆರೋಗ್ಯ ಇಲಾಖೆ ಹಮ್ಮಿಕೊಂಡಿದ್ದ ವಿಶ್ವಡೆಂಗ್ಯೂ ದಿನಾಚರಣೆ ಅಂಗವಾಗಿ ಪ್ರೌಢಶಾಲಾ ವಿಜ್ಞಾನ ಶಿಕ್ಷಕರಿಗೆ ಹಮ್ಮಿಕೊಂಡಿದ್ದ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಆರೋಗ್ಯ ಇಲಾಖೆಯ ಈ ಕಾರ್ಯ ಮುಂದಿನ ದಿನಗಳಲ್ಲೂ ಸಹ ಉತ್ತಮವಾಗಿ ಸಾಗಲಿದ್ದು, ಎಲ್ಲರೂ ಆರೋಗ್ಯ ಇಲಾಖೆಯ ನಿಯಮಗಳನ್ನು ಪಾಲಿಸುವತ್ತ ಗಮನ ನೀಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಪ್ರತಿವರ್ಷ ಆರೋಗ್ಯ ಇಲಾಖೆ ಹಲವಾರು ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ಏರ್ಪಡಿಸುತ್ತಾ ಬಂದಿದೆ. ಆಶಾ ಕಾರ್ಯಕರ್ತರ ಸಹಕಾರದಿಂದ ಗ್ರಾಮೀಣ ಭಾಗದಲ್ಲೂ ಸಹ ವಿಶ್ವಡೆಂಗ್ಯೂದಿನಾಚರಣೆಗೆ ಪೂರಕವಾಗುವ ವಾತಾವರಣವನ್ನು ಜಾಗೃತಿಜಾಥ ಹಾಗೂ ಮನೆ, ಮನೆಗೂ ಸಮೀಕ್ಷೆ ನಡೆಸಿ ಜಾಗೃತಿ ಉಂಟು ಮಾಡುತ್ತಿರುವುದು ಯಶಸ್ವಿತಂದಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್.ಕಾಶಿ ಮಾತನಾಡಿ, ನಮ್ಮ ಸುತ್ತಮುತ್ತಲಿನ ಪರಿಸರ ನಮ್ಮ ಆರೋಗ್ಯದ ಮೇಲೆ ಗಂಭೀರಪರಿಣಾಮವನ್ನು ಬೀರಲಿದೆ. ಇತ್ತೀಚಿನ ದಿನಗಳಲ್ಲಿ ಮಳೆ ಹೆಚ್ಚಾಗಿ ಸೊಳ್ಳೆಗಳ ಕಾಟ ಹೆಚ್ಚಿದ್ದು ಈ ಬಗ್ಗೆ ಜನರು ಹೆಚ್ಚು ಜಾಗೃತರಾಗಬೇಕು. ವಿಶ್ವಡೆಂಗ್ಯೂವಿರೋಧಿ ಮಾಸಾಚರಣೆ ಯಶಸ್ವಿಯಾಗಲು ಎಲ್ಲರೂ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದರು. ತಾಲ್ಲೂಕಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಆಶಾಕಾರ್ಯಕರ್ತೆಯರು ಜಾಗೃತಿ ಜಾಥ ನಡೆಸಿದರು.

ಕಾರ್ಯಕ್ರಮದಲ್ಲಿ ಬಿಪಿಎಂ ಪ್ರದೀಪ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಅಮೃತ್‌ರಾಜ್, ಸಂಜಯ್, ರಾಜು ಮುಂತಾದವರು ಉಪಸ್ಥಿತರಿದ್ದರು.

## ಗುಣಾತ್ಮಕ ಶಿಕ್ಷಣ ನೀಡಿ ವಿದ್ಯಾರ್ಥಿಗಳ ಭವಿಷ್ಯವನ್ನು ಉತ್ತಮಪಡಿಸಿ: ಕೆ.ಎಸ್.ಸುರೇಶ್



» ಚಳ್ಳಕೆರೆ

ಪ್ರತಿಯೊಬ್ಬ ವಿದ್ಯಾರ್ಥಿಯೂ ಶಾಲಾ ಹಂತದಿಂದಲೇ ತನ್ನ ಭವಿಷ್ಯವನ್ನು ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ. ಶಿಕ್ಷಣವಿಲ್ಲದಿದ್ದರೆ ಯಾರಿಗೂ ಭವಿಷ್ಯವಿರುವುದಿಲ್ಲ. ಉತ್ತಮ ಬದುಕನ್ನು ರೂಪಿಸಿಕೊಳ್ಳಲು ನಾವೆಲ್ಲ ಶಿಕ್ಷಣವಂತರಾದರೆ ಮಾತ್ರ ಸಾಧ್ಯ. ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡಿ ಅವರ ಬದುಕನ್ನು ಉಜ್ವಲಗೊಳಿಸಲು ಶಿಕ್ಷಕರು ಮುಂದಾಗಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಸೋಮವಾರ ತಳಕು ಹೋಬಳಿ ಮಟ್ಟದ ಮುಖ್ಯ ಶಿಕ್ಷಕರು, ಸಿಆರ್‌ಪಿಗಳ ಸಭೆಯಲ್ಲಿ ಭಾಗವಹಿಸಿ ಮೇ.29ರಿಂದ ಶಾಲೆಗಳು ಪ್ರಾರಂಭವಾಗುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಪೂರ್ವಸಿದ್ದತೆಗಳ ಬಗ್ಗೆ ಚರ್ಚೆ ನಡೆಸಿ ಮಾತನಾಡಿದರು. ತಾಲ್ಲೂಕಿನಾದ್ಯಂತ ಈಗಾಗಲೇ ಸರ್ಕಾರಿ ಶಾಲೆಗಳಿಗೆ ದಾಖಲಾತಿ ಪಡೆಯಲು ವಿದ್ಯಾರ್ಥಿಗಳು ಉತ್ಸಾಹದಿಂದ ಇದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ಮುಖ್ಯ ಶಿಕ್ಷಕರು ಹಾಗೂ ಸಿಆರ್‌ಪಿಗಳು ಸೂಕ್ತಮಾರ್ಗಸೂಚಿ ನಿರ್ಮಿಸಿ ಕಾರ್ಯನಿರ್ವಹಿಸಬೇಕಿದೆ. ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವ ಕಾರ್ಯಕ್ಕೆ ಸದಾಸಹಕಾರ ನೀಡುವ ಭರವಸೆ ನೀಡಿದರು. ಇಸಿಒ ಮಾರುತಿಭಂಡಾರಿ ಪ್ರಾಸ್ತಾವಿಕವಾಗಿ ಮಾತನಾಡಿ, ತಾಲ್ಲೂಕಿನ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಶಾಲೆಗಳು ಏಕಕಾಲದಲ್ಲಿ ಆರಂಭವಾಗಲಿವೆ. ಈಗಾಗಲೇ ಜಿಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮಾರ್ಗದರ್ಶನದಲ್ಲಿ ಶಾಲೆಗೆ ದಾಖಲಾಗುವ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಬಗ್ಗೆ ಚಿಂತನೆ ನಡೆಸಲಾಗಿದೆ. ಶಿಕ್ಷಣ ಇಲಾಖೆ ಇಂದು ಮೊದಲ ಆದ್ಯತೆಯನ್ನು ಮಕ್ಕಳ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದೆ. ಎಲ್ಲರ ಸಹಕಾರದಿಂದ ಶಿಕ್ಷಣ ಇಲಾಖೆಯ ಕಾರ್ಯಚಟುವಟಿಕೆಗಳು ಸಫಲವಾಗಬೇಕು ಎಂದರು. ಅಕ್ಷರದಾಸೋಹ ಅಧಿಕಾರಿ ಬಿ.ತಿಪ್ಪೇಸ್ವಾಮಿ, ಪ್ರಾಥಮಿಕಶಾಲಾ ಶಿಕ್ಷಕರ ಸಂಘದ ರಾಜ್ಯ ಉಪಾಧ್ಯಕ್ಷೆ ಸಣ್ಣಸೂರಮ್ಮ, ತಾಲ್ಲೂಕು ಅಧ್ಯಕ್ಷ ಮಹಲಿಂಗಪ್ಪ, ಪ್ರಧಾನ ಕಾರ್ಯದರ್ಶಿ ಎಸ್.ಟಿ.ತಿಪ್ಪೇಸ್ವಾಮಿ, ಸರ್ಕಾರಿ ನೌಕರರ ಸಂಘದ ನಿರ್ದೇಶಕ ಟಿ.ವಿ.ತಿಪ್ಪೇಸ್ವಾಮಿ, ಸಿಆರ್‌ಪಿ ಸಂಘದ ಅಧ್ಯಕ್ಷ ಎನ್.ಮಾರಣ್ಣ, ಭೀಮಾರೆಡ್ಡಿ, ಪಿ.ಮಹಂತೇಶ್, ವಿಷ್ಣುವರ್ಧನ್, ರಾಜಣ್ಣ, ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

## ಜಿಲ್ಲಾ ಕಾಂಗ್ರೆಸ್ ಪದವೀಧರ ವಿಭಾಗದ ಜಿಲ್ಲಾ ಕಾರ್ಯದರ್ಶಿ ನೇಮಕ

ಚಿತ್ರದುರ್ಗ: ಕರ್ನಾಟಕ ಪ್ರದೇಶ ಕಾಂಗ್ರೆಸ್ ಪದವೀಧರ ವಿಭಾಗದ ರಾಜ್ಯಾಧ್ಯಕ್ಷ ನಟರಾಜ್‌ಗೌಡರವರ ಆದೇಶದಂತೆ ಕಾಂಗ್ರೆಸ್ ಪದವೀಧರ ವಿಭಾಗದ ಜಿಲ್ಲಾ ಕಾರ್ಯದರ್ಶಿಯಾಗಿ ಹೊಸದುರ್ಗ ತಾಲ್ಲೂಕು ಲಕ್ಕಿಹಳ್ಳಿಯ ಮುರಳಿಧರ ಟಿ. ಇವರನ್ನು ನೇಮಕ ಮಾಡಲಾಗಿದೆ. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್‌ರವರು ಕಾಂಗ್ರೆಸ್ ಕಚೇರಿಯಲ್ಲಿ ಮುರಳಿಧರ ಟಿ. ರವರಿಗೆ ನೇಮಕಾತಿ ಪತ್ರ ನೀಡಿ ಪದವೀಧರ ವಿಭಾಗವನ್ನು ಸಂಘಟಿಸುವಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುವಂತೆ ಸೂಚಿಸಿದರು.ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್. ಮೈಲಾರಪ್ಪ,ಪದವೀಧರ ವಿಭಾಗದ ಜಿಲ್ಲಾಧ್ಯಕ್ಷ ಮುದಸಿರ್‌ನವಾಜ್, ಶಬ್ಬೀರ್‌ಭಾಷ, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಲಕ್ಷ್ಮಿಕಾಂತ್ ಈ ಸಂದರ್ಭದಲ್ಲಿ ಹಾಜರಿದ್ದರು.




ಪ್ರಮುಖ ಸುದ್ದಿ

### ಶೀಘ್ರವೇ ವಸತಿ ಸಚಿವರ ಬೇಟಿಗೆ ತೀರ್ಮಾನ –ಬಡಗಿ ನೌಕರರ ಸಂಘದ ವಿಶೇಷ ಸಭೆ

# ಬಡಗಿ ನೌಕರರ ನಿವೇಶನ ಹಂಚಿಕೆ ವಿಳಂಭಕ್ಕೆ ಆಕ್ರೋಶ

» ಚಿತ್ರದುರ್ಗ

ನಗರಕ್ಕೆ ಸಮೀಪದಲ್ಲಿ ನಿರ್ಮಾಣ ಹಂತದಲ್ಲಿರುವ ಬಡಗಿ ನೌಕರರ ಬಡಾವಣೆಯಲ್ಲಿಅರ್ಹಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮತ್ತು ಈಗಾಗಲೇ ಅನುಮೋದನೆ ಪಡೆದಿರುವ ರಾಜೀವ್ ಗಾಂಧಿ ವಸತಿ ಯೋಜನೆಯಡಿಲ್ಲಿ ಮನೆಗಳನ್ನು ನಿರ್ಮಿಸುವ ಸಲುವಾಗಿ ತುರ್ತು ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಮತ್ತೊಮ್ಮೆ ಮನವಿ ಸಲ್ಲಿಸಲು ಬಡಗಿ ಕೆಲಸಗಾರರ ಕ್ಷೇಮಾಭಿವೃದ್ದಿ ಸಂಘದ ತೀರ್ಮಾನ ಕೈಗೊಂಡಿದೆ



ದವಳಗಿರಿ ಬಡಾವಣೆಯಲ್ಲಿ ಇರುವ ಜಿಲ್ಲಾ ಬಡಗಿ ಕೆಲಸಗಾರರ ಕ್ಷೇಮಾಭಿವೃದ್ದಿ ಸಂಘದ ಕಚೇರಿಯಲ್ಲಿ ನಡೆದ ಸಂಘದ ವಿಶೇಷ ತುರ್ತು ಸಭೆಯಲ್ಲಿ ಸೇರಿದ್ದ ಬಹುತೇಕ ನಿರ್ದೇಶಕರುಗಳು, ಉದ್ದೇಶಿತ ಬಡಾವಣೆಯಲ್ಲಿ ಅರ್ಹ ಬಡ ಕಾರ್ಮಿಕರಿಗೆ ನಿವೇಶನ ಹಂಚಿಕೆಯಲ್ಲಿ ಆಗಿರುವ ವಿಳಂಬದ ಬಗ್ಗೆ ಸುದೀರ್ಘವಾಗಿ ಚರ್ಚೆ ಮಾಡಿದ ಪದಾಧಿಕಾರಿಗಳು, ಈ ವಿಚಾರದಲ್ಲಿ ಅಧಿಕಾರಿಗಳು ತೋರುತ್ತಿರುವ ನಿರ್ಲಕ್ಷ ದೋರಣೆ ವಿರುದ್ದ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಅಂತಿಮವಾಗಿ ಈ ಸಂಬಂಧ ವಸತಿ ಸಚಿವರು ಮತ್ತು ಕಾರ್ಮಿಕ ಇಲಾಖೆಯ ಸಚಿವರನ್ನು ಬೇಟಿ ಮಾಡಿ ವಿಶೇಷ ಮನವಿ ಸಲ್ಲಿಸಲು ಸಹಮತ ವ್ಯಕ್ತಪಡಿಸಿದರು

ಚಿತ್ರದುರ್ಗಕ್ಕೆ ಸಮೀಪದಲ್ಲಿ ದಾವಣಗೆರೆ ರಸ್ತೆಯಲ್ಲಿ ಬಡಗಿ ಕೆಲಸಗಾರರಿಗೆ ನಿವೇಶನ ಕಲ್ಪಿಸಿಕೊಡುವ ದೃಷ್ಟಿಯಿಂದ ಜಮೀನು ಖರೀದಿ ಮಾಡಲಾಗಿದ್ದು, ಈಗಾಗಲೇ ಬಡಾವಣೆಯನ್ನೂ ನಿರ್ಮಿಸಲಾಗಿದೆ. ಕೆಲವು ಸಣ್ಣಪುಟ್ಟ ಕೆಲಸವಷ್ಟೇ ಉಳಿದಿದೆ. ಉಳಿದಂತೆ ಸರ್ಕಾರದ ನಿಯಮಾನುಸಾರವಾಗಿ ನಿವೇಶನ ಹಂಚಿಕೆ ಮತ್ತು ರಾಜೀವ್ ಗಾಂಧಿ ಯೋಜನೆಯಡಿಯಲ್ಲಿ ಮನೆಗಳನ್ನು ನಿರ್ಮಿಸಿಕೊಡುಲು ಸರ್ಕಾರದ ಮಟ್ಟದಲ್ಲಿ ಅನುಮೋದನೆಯೂ ಸಿಕ್ಕಿದೆ.

ಕೆಲವು ತಾಂತ್ರಿಕ ಕಾರಣಗಳಿಂದಾಗಿ ಈ ಕಾರ್ಯ ಸ್ವಲ್ಪ ಮಟ್ಟಿಗೆ ವಿಳಂಭವಾಗಿದೆ. ಅರ್ಹರಿಗೆ ನಿವೇಶನ ಮತ್ತು ಮನೆ ನಿರ್ಮಾಣ ವಿಚಾರದಲ್ಲಿ ನಮ್ಮ ಸಂಘ ಇಂದಿಗೂ ಬದ್ದವಾಗಿದೆ ಎಂದು ಸಂಘದ ಅಧ್ಯಕ್ಷ ಎ.ಜಾಕೀರ್ ಹುಸೇನ್ ಸ್ಪಷ್ಟ ಪಡಿಸಿದರು

ಚಿತ್ರದುರ್ಗದಲ್ಲಿ ನಮ್ಮ ಸಂಘಟನೆ ಮಾಡಿರುವ ಕೆಲಸ ಇಡೀ ರಾಜ್ಯಕ್ಕೆ ಮಾದರಿಯಾಗಿದೆ.

ಬಡವರು ಅದರಲ್ಲೂ ಬಡಗಿ ಕೆಲಸಗಾರರಿಗೆ ಕಡಿಮೆ ಮೊತ್ತದಲ್ಲಿ ನಿವೇಶನ ಹಂಚಿಕೆ ಮಾಡುತ್ತಿರುವುದು ನಮ್ಮ ಸಂಘದ ಹೆಮ್ಮೆಯ ವಿಚಾರ. ಬಡಗಿ ಕೆಲಸಗಾರರು ಕಳೆದ ಸುಮಾರು 13 ವರ್ಷಗಳಿಂದ ನಿವೇಶನಕ್ಕಾಗಿ ಕಾಯುತ್ತಿದ್ದಾರೆ. ನಾವು ಈ ಪುಣ್ಯದ ಕೆಲಸವನ್ನು ಜರೂರಾಗಿ ಮಾಡಿ ಮುಗಿಸಲು ಸಾಕಷ್ಟು ಪ್ರಯತ್ನ ಮಾಡುತ್ತಿದ್ದೇವೆ. ಆದರೆ ಸರ್ಕಾರ ಮತ್ತು ಜನಪ್ರತಿನಿಧಿಗಳು ಸರಿಯಾಗಿ ಸ್ಪಂದಿಸುತ್ತಿಲ್ಲವೆಂದು ಹೇಳಿದರು

ಬಡಾವಣೆ ನಿರ್ಮಾಣ ಕೆಲಸ ಶುರುವಾಗಿ ಇಂದಿಗೆ ಹತ್ತು ವರ್ಷ ಕಳೆದಿದೆ. ಸರ್ಕಾರದ ಆದೇಶದ ಪ್ರಕಾರ ಜಮೀನನ್ನೂ ಸಹ ಬರೆದುಕೊಟ್ಟಿದ್ದೇವೆ. ಆದರೂ ಇದವರೆಗೂ ನಿವೇಶಹ ಹಂಚಿಕೆಗೆ ಅಗತ್ಯ ಕ್ರಮ ಕೈಗೊಂಡಿಲ್ಲ. ಶಾಸರಕು, ಜಿಲ್ಲಾಧಿಕಾರಿಗಳು, ಮಂತ್ರಿಗಳು ಹೀಗೆ ಅನೇಕ ನಾಯಕರ ಮನೆ ಬಾಗಿಲಿಗೆ ತಿರುಗಿ ರೋಸಿ ಹೋಗಿದ್ದೇವೆ. ಈ ಹಿನ್ನಲೆಯಲ್ಲಿ ಅಂತಿಮವಾಗಿ ವಸತಿ ಸಚಿವರು ಮತ್ತು ಕಾರ್ಮಿಕ ಇಲಾಖೆಯ ಸಚಿವರು ಹಾಗೂ ಸಂಬಂಧ ಪಟ್ಟ ಅಧಿಕಾರಿಗಳನ್ನು ಪ್ರತ್ಯೇಕವಾಗಿ ಬೇಟಿ ಮಾಡಿ ಮನವಿ ಸಲ್ಲಿಸಲು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಜಾಕೀರ್ ಹುಸೇನ್ ತಿಳಿಸಿದರು

ಬಹಳ ಜನ ಬಡವರು ಕುಶಲ ಕರ್ಮಿಗಳು ಕಡಿಮೆ ಬೆಲೆಯಲ್ಲಿ ನಿವೇಶನ ಸಿಗುತ್ತದೆ ಎಂದು ಜಾತಕ ಪಕ್ಷಿಯಂತೆ ಕಾಯುತ್ತಿದ್ದಾರೆ. ಬಹುತೇಕ ಫಲಾನುಭವಿಗಳು ನಿತ್ಯವೂ ಕಚೇರಿಗೆ ಬಂದು ಬೇಸರ ವ್ಯಕ್ತ ಪಡಿಸುತ್ತಿದ್ದಾರೆ. ಸಂಘದ ಜಮೀನು ಇದೆ. ಬಡಾವಣೆಯೂ ನಿರ್ಮಾಣವಾಗಿದೆ.

ರಸ್ತೆ ಇನ್ನಿರೆ ಸೌಲಬ್ಯ ಕಲ್ಪಿಸುವ ಕಾಮಗಾರಿಯೂ ಚಾಲ್ತಿಯಲ್ಲಿವೆ. ಸರ್ಕಾರದ ಮಟ್ಟದಲ್ಲಿ ಆಗಿರುವ ವಿಳಂಬ, ಅಧಿಕಾರಿಗಳ ನಿರ್ಲಕ್ಷ ದೋರಣೆಯಿಂದ ಕುಂಟಿತವಾಗಿದೆ. ಅದಕ್ಕಾಗಿ ನಾವು ಕ್ಷಮೆ ಕೇಳುತ್ತೇವೆ. ಈ ವರ್ಷದ ಅಂತ್ಯದೊಳಗೆ ಯೋಜನೆಯನ್ನು ಜಾರಿಗೆ ತಂದೇ ತರುತ್ತೇವೆ ಎಂದು ಪದಾಧಿಕಾರಿಗಳಾದ ಎ.ವಿ.ಜಗದೀಶಚಾರ್, ಆರೂಢಾ ಚಾರ್ ವಿಶ್ವಾಸ ವ್ಯಕ್ತಪಡಿಸಿದರು

ಜೂನ್ ಮೊದಲವಾರದಲ್ಲಿ ಇಬ್ಬರು ಸಚಿವರನ್ನು ಬೇಟಿ ಮಾಡಿ ನಿವೇಶನ ಹಂಚಿಕೆಗೆ ಚಾಲನೆ ನೀಡಲು ಅಗತ್ಯ ಕ್ರಮ ಕೈಗೊಳ್ಳಲು ಮನವಿ ಸಲ್ಲಿಸುವುದು, ಅದಕ್ಕೂ ಮೊದಲು ಜಿಲ್ಲಾಧಿಕಾರಿಗಳ ಜೊತೆ ಪದಾಧಿಕಾರಿಗಳು ಚರ್ಚೆ ಮಾಡುವುದು ಸೇರಿದಮತೆ ಇನ್ನಿತರೆ ವಿಚಾರಗಳ ಕುರಿತು ಚರ್ಚಿಸಿ ತೀರ್ಮಾನ ಕೈಗೊಳ್ಳಲಾಯಿತು

ಬಡಗಿ ನೌಕರರ ಸಂಘದ ಉಪಾಧ್ಯಕ್ಷ ಎ.ವಿ.ಜಗದೀಶಾಚಾರ್,ಕಾರ್ಯದರ್ಶಿ ಆರೂಢಾಚಾರ್, ಖಜಾಂಚಿ ಬಸವರಾಜ್, ಸಹ ಕಾರ್ಯದಶಿಶ ಎಂ.ಡಿ.ಅಸ್ಲಾಂ, ನಿರ್ದೇಶಕರಾದ ವಿ.ಜೆ.ಗಂಗಾಧರ್, ಸುರೇಶ್ ಆರ್, ಕೆ.ಜಗದೀಶಚಾರ್, ಸೈಯದ್ ಅಕ್ಬರ್ ಇನ್ನಿತರರು ಸಭೆಯಲ್ಲಿ ಹಾಜರಿದ್ದರು





**ಭಾರತದ ಸ್ವಾತಂತ್ರ್ಯ ನಂತರ ಅತಿಹೆಚ್ಚು ಚರ್ಚಿತವಾಗುತ್ತಿರುವ ಎರಡು ವ್ಯಕ್ತಿಗಳು ಮತ್ತು ಶಕ್ತಿಗಳೆಂದರೆ ಮಹಾತ್ಮ ಗಾಂಧಿ ಮತ್ತು ಬಾಬಾ ಸಾಹೇಬ್ ಅಂಬೇಡ್ಕರ್.**

**ಗಾಂಧಿ ವಾದ ಮತ್ತು ಅಂಬೇಡ್ಕರ್ ವಾದ ವಿವಿಧ ಆಯಾಮಗಳನ್ನು ಪಡೆಯುತ್ತಾ, ಬೆಳೆಯುತ್ತಾ, ಘರ್ಷಣೆಗೆ ಒಳಪಡುತ್ತಾ, ವಿವಾದವಾಗುತ್ತಾ ಸಾಗುತ್ತಿದೆ.**

## ಗಾಂಧಿ ಮತ್ತು ಅಂಬೇಡ್ಕರ್ ....

- **ವಿರೋಧಿಗಳೇ ? ಸ್ನೇಹಿತರೇ ? ಭಿನ್ನ ಅಭಿಪ್ರಾಯದವರೇ ? ಸ್ವಾರ್ಥಿಗಳೇ ? ಆದರ್ಶಗಳೇ ?**
- **ಪ್ರಸ್ತುತರೇ - ಅಪ್ರಸ್ತುತರೇ ? ದೇಶದ ಹಿತಾಸಕ್ತಿಗೆ ಮಾರಕವೇ ಪೂರಕವೇ ? ಎಂಬ ಪ್ರಶ್ನೆಗಳ ಜೊತೆಗೆ....**



ಅವರನ್ನು ಹೇಗೆ ಅರ್ಥೈಸಿಕೊಳ್ಳುವುದು ?

ಎಷ್ಟು ಅಧ್ಯಯನ ಮಾಡಬೇಕು ? ಎಷ್ಟು ಚಿಂತನೆಗೆ ಒಳಪಡಬೇಕು ? ಎಷ್ಟು ಚರ್ಚಿಸಬೇಕು ? ಯಾವುದನ್ನು ಗ್ರಹಿಸಬೇಕು ? ಎಷ್ಟು ಅನುಭವ ಇರಬೇಕು ? ಯಾವ ಹಿನ್ನೆಲೆಯಲ್ಲಿ ಇದನ್ನು ಯೋಚಿಸಬೇಕು ? ಎಂಬುದು ಮುಖ್ಯವಾಗುತ್ತದೆ..

ಅದಕ್ಕಾಗಿ ಒಂದು ಸರಳ ಕ್ರಮ ಮತ್ತು ಮಾನಸಿಕ ಕಸರತ್ತು.......

ಅದಕ್ಕಾಗಿ ಕೆಲಹೊತ್ತು ಅಂಬೇಡ್ಕರ್ ಅವರನ್ನು ಸಂಪೂರ್ಣವಾಗಿ ಮರೆತು ಗಾಂಧಿಯವರ ಹುಟ್ಟೂರು ಪೋರ್ ಬಂದರ್ ಗೆ ಮಾನಸ್ಸಿನಲ್ಲೇ ಪ್ರಯಾಣಿಸಿ. ಗಾಂಧಿ ಹುಟ್ಟಿದ 1869, ಆ ಕಾಲದ ಸಾಮಾಜಿಕ ಸ್ಥಿತಿಗತಿಗಳು ಅದರ ಸುತ್ತಮುತ್ತಲಿನ ವಾತಾವರಣ ಗಮನಿಸಿ. ಅವರ ಓದು ಬ್ಯಾರಿಸ್ಟರ್ ಪದವಿ, ದಕ್ಷಿಣ ಆಫ್ರಿಕಾದ ಹೋರಾಟ, ಭಾರತಕ್ಕೆ ಆಗಮನ, ಸ್ವಾತಂತ್ರ್ಯ ಚಳುವಳಿ, ಕೊನೆಗೆ ಗುಂಡಿಗೆ ಬಲಿಯಾದ ಘಟನೆ ನೆನಪಿಸಿಕೊಳ್ಳಿ. ಸಾಧ್ಯವಾದರೆ ಅವರ ಆತ್ಮಕಥೆ " ಸತ್ಯದೊಂದಿಗೆ ನನ್ನ ಪ್ರಯೋಗ " ಓದಿ. ಉದ್ದೇಶಪೂರ್ವಕವಾಗಿ ಅವರನ್ನು ಪ್ರೀತಿಸಿ. ಅವರ ಆತ್ಮವನ್ನು ಸಹಜವಾಗಿ ಪ್ರವೇಶಿಸಿ. ಅವರ ನೆಲೆಯಲ್ಲಿ ನಿಂತು ಯೋಚಿಸಿ. ಆ ಪ್ರಬುದ್ಧತೆ ನಿಮಗಿದೆ.

ಅವರು ಆಗಿನ ಮೀಸಲಾತಿಯನ್ನು ವಿರೋಧಿಸಲು ಇರುವ ಕಾರಣ, ವರ್ಣಾಶ್ರಮ ಧರ್ಮ ಸಮರ್ಥಿಸಿದ ರೀತಿ, ನಂತರ ಅದನ್ನು ವಿರೋಧಿಸಿ ಬದಲಾಗಲು ಕಾರಣ, ಅವರ ಸರಳತೆ, ಸತ್ಯ, ಅಹಿಂಸೆ, ಸಂಘಟನೆ, ಪಾರದರ್ಶಕತೆ ಬಗ್ಗೆ ಗೌರವದಿಂದ ಅವಲೋಕಿಸಿ.

ಸ್ವಾತಂತ್ರ್ಯಹೋರಾಟಕ್ಕೆಸಿಕ್ಕಜಯಕ್ಕೆಅವರೆಷ್ಟುಕಾರಣ ಎಂದು ವಿಶಾಲ ಮನೋಭಾವದಿಂದ ವಿಮರ್ಶಿಸಿ. ಮಹಾತ್ಮನಾಗಿ ಅಲ್ಲದಿದ್ದರೂ ಸಾಮಾನ್ಯನಾಗಿ ಅವರ ಹೋರಾಟ ಎಷ್ಟು ಕಷ್ಟದ್ದಿರಬಹುದೆಂದು ನಿಮಗೆ ನಿಲುಕಿದಷ್ಟು ಗ್ರಹಿಸಿ ..

ಹಾಗೆಯೇ ಇತ್ತ ಕಡೆ ಗಾಂಧಿಯನ್ನು ಇಷ್ಟ ಪಡುವವರೆ ಕೆಲಹೊತ್ತು ಗಾಂಧಿಯನ್ನು ಮರೆತುಬಿಡಿ. ನೇರ ಅಂಬೇಡ್ಕರ್ ಹುಟ್ಟಿದ ಅಂಬೇವಾಡಿಗೆ ಮನಸ್ಸಿನಲ್ಲೇ ಪ್ರಯಾಣಿಸಿ. ಆಗಿನ ಜಾತಿ ವ್ಯವಸ್ಥೆಯಲ್ಲಿ ಮಹರ್ ಜನಾಂಗದ ಹೀನಾಯದ ಸ್ಥಿತಿ ಗಮನಿಸಿ. ಪ್ರಾಣಿಗಳಿಗಿಂತ ಹೀನಾಯವಾಗಿ ಕಾಣುತ್ತಿದ್ದ ಆಗಿನ ಕಾಲದ ಅಸ್ಪೃಶ್ಯರ ಬದುಕು ಗಮನಿಸಿ. ಆ ಸ್ಥಿತಿಯಿಂದಾಗಿ ಜಗತ್ತಿನ ಎಲ್ಲಾ ಧರ್ಮಗಳನ್ನು, ಗ್ರಂಥಗಳನ್ನು, ಸಂವಿಧಾನಗಳನ್ನು ಅರೆದು ಕುಡಿದು ಜೀರ್ಣಿಸಿಕೊಂಡ ಸಾಮಾನ್ಯನ ಜೀವನ ಕಲ್ಪಿಸಿಕೊಳ್ಳಿ.

ಆಗ ಅವರ ಅನುಭವಿಸಿದ ನೋವು ನಿಮಗಾಗಲಿ. ಅವರ ಕಾಲದ ಸಂದರ್ಭದಲ್ಲಿ ತನ್ನ ಜನಗಳಿಗಾಗಿ ಅವರ ಮಾಡಬಹುದಾದ ತ್ಯಾಗ, ಹೋರಾಟದ ಬಗ್ಗೆ ಅವರ ಆತ್ಮ ಪ್ರವೇಶಿಸಿ ನಿಮ್ಮನ್ನೇ ಪ್ರಶ್ನಿಸಿಕೊಳ್ಳಿ. ಅವರನ್ನು ನಿಮ್ಮವರೆಂದೇ ಪ್ರೀತಿಸಿ.

ಈಗ ಇಬ್ಬರಿಂದಲೂ ಹೊರಬಂದು ನಿಮ್ಮ ಇಂದಿನ ನೆಲೆಯಲ್ಲಿ, ಸಂಕೀರ್ಣವಾದ ಸಾಮಾಜಿಕ ಮತ್ತು ವೈಯಕ್ತಿಕ ಬದುಕಿನ ಹಿನ್ನೆಲೆಯಲ್ಲಿ ವಿಮರ್ಶಿಸಿ. ಯಾರಿಗೆ ಯಾವ ವಿಷಯ ಪ್ರಮುಖವಾಗಿತ್ತು ಮತ್ತು ಅದನ್ನು ಸಾಧಿಸಲು ಅವರಿಬ್ಬರೂ ಏನು ಮಾಡಿದರೆಂದು.

ಗಾಂಧಿಗೆ ದೇಶದ ಸ್ವಾತಂತ್ರ್ಯವೇ ಮುಖ್ಯವಾಗಿತ್ತು. ಬ್ರಿಟಿಷ್ ರನ್ನು ತೊಲಗಿಸಿ ನಂತರ ನಮ್ಮೊಳಗಿನ ಸಮಸ್ಯೆ ಮುಖ್ಯವಾಗಿ ಅಸ್ಪೃಶ್ಯತೆ ಮತ್ತು ಮೀಸಲಾತಿಯನ್ನು ಪರಿಹರಿಸಿಕೊಳ್ಳೋಣ. ಈ ಜನ ಹರಿಜನ ನನ್ನವರೇ, ಅವರನ್ನು ಬೇರೆ ಮಾಡುವುದು ಬೇಡ ಎಂಬ ಅತ್ಯಂತ ಆದರ್ಶ ಆಶಯ ಹೊಂದಿದ್ದರು. ಅದಕ್ಕಾಗಿ ತಮ್ಮೆಲ್ಲಾ ಶಕ್ತಿ, ಹೋರಾಟ, ಸಂಘಟನೆ, ಶ್ರಮವನ್ನು ಸ್ವಾತಂತ್ರ್ಯಕ್ಕಾಗಿ ಮೀಸಲಿಟ್ಟರು ಮತ್ತು ಅದೇ ಅವರ ಮುಖ್ಯ ಗುರಿಯಾಗಿತ್ತು.

ಆದರೆ ವಾಸ್ತವವಾದಿ, ಆದರ್ಶಕ್ಕಿಂತ ನೈಜ ಭಾರತೀಯ ಸಂಸ್ಕೃತಿಯ ಅರಿವಿದ್ದ ಅಂಬೇಡ್ಕರ್ ಅವರಿಗೆ ಗಾಂಧಿಯ ಆದರ್ಶ ಅವರಿಗೆ ಮಾತ್ರ ಸೀಮಿತ. ಸಾಮಾನ್ಯ ಜನ ಅವರ ಆದರ್ಶದ ಹತ್ತಿರಕ್ಕೂ ಸುಳಿಯದ ಶತಶತಮಾನಗಳ ಕ್ರೂರ ಜಾತಿ ವ್ಯವಸ್ಥೆಯಲ್ಲಿ ಮಲಿನಗೊಂಡ ಮನಸ್ಥಿತಿಗಳು ಎಂದು ಸ್ಪಷ್ಟವಾಗಿ ತಿಳಿದಿತ್ತು. ಅದಕ್ಕಾಗಿ ಅಂಬೇಡ್ಕರ್ ಪ್ರಾಮುಖ್ಯತೆ ಶೋಷಿತರ ಸ್ವಾತಂತ್ರ್ಯವಾಗಿತ್ತು.

ಅದಿಲ್ಲದೆ ದೇಶದ ಸ್ವಾತಂತ್ರ್ಯ ನಿಷ್ಪ್ರಯೋಜಕ ಮತ್ತು ಅಪಾಯಕಾರಿ ಎಂಬ ಅರಿವಿತ್ತು. ಬ್ರಿಟಿಷರಿಗಿಂತ ಇಲ್ಲಿನ ಮೂಲಭೂತವಾದಿಗಳೇ ಅತ್ಯಂತ ಕ್ರೂರಿಗಳು ಎಂದು ಮನವರಿಕೆಯಾಗಿತ್ತು.

ಆ ಕಾರಣಕ್ಕಾಗಿ ಅವರು ಗಾಂಧಿಯನ್ನು ಗೌರವಿಸಿದರೂ ಕೆಲ ವಿಷಯಗಳಲ್ಲಿ ಉಗ್ರವಾಗಿ ವಿರೋಧಿಸಿದರು. ಅದು ಸರಿಯೂ ಆಗಿತ್ತು. ಒಂದು ವೇಳೆ ಗಾಂಧಿ ಅಂಬೇಡ್ಕರ್ ಅವರನ್ನು ವೈಯಕ್ತಿಕವಾಗಿ ವಿರೋಧಿಸಿದ್ದರೆ ಆಗ ಅವರಿಗಿದ್ದ ಪ್ರಭಾವ ಉಪಯೋಗಿಸಿ ಅಂಬೇಡ್ಕರ್ ಅವರಿಗೆ ಸಿಕ್ಕ ಸಂವಿಧಾನದ ಕರಡು ರಚನಾ ಸಮಿತಿಯ ಅಧ್ಯಕ್ಷತೆ ಅಥವಾ ಇತರ ಪ್ರಮುಖ ಸ್ಥಾನ ತಪ್ಪಿಸಬಹುದಿತ್ತು. ನೆಹರು ಅವರ ಬೆಂಬಲ ಅವರಿಗೆ ಇದ್ದೇ ಇತ್ತು. ಬಹುಶಃ ಗಾಂಧಿಯವರ ಉದ್ದೇಶ ಅದಿರಲಾರದು.

ನಾವು ಈಗ ಈ ಕ್ಷಣದಲ್ಲಿ ನಿಂತು ಅವರ ಸರಿ ತಪ್ಪುಗಳನ್ನು ಫಲಿತಾಂಶಗಳ ಆಧಾರದ ಮೇಲೆ ವಿಮರ್ಶಿಸಿ ತೀರ್ಪು ನೀಡುವುದು ಸತ್ವದ ಒಂದು ಮುಖವಷ್ಟೇ ಆಗುತ್ತದೆ. ಇಬ್ಬರನ್ನೂ ಅವರು ಇದ್ದ ಹಾಗೆಯೇ ಸ್ವೀಕರಿಸಬೇಕು.

ಯಾರೂ ಪರಿಪೂರ್ಣರಲ್ಲ. ಇತಿಹಾಸದ ಅನೇಕ ನಿರ್ಧಾರಗಳು ಆ ಕಾಲಘಟ್ಟದಲ್ಲಿ ಸರಿ ಎನಿಸಿ ಕಾಲಾನಂತರದಲ್ಲಿ ತಪ್ಪು ಫಲಿತಾಂಶ ನೀಡಿರುವ ಅನೇಕ ಘಟನೆಗಳಿವೆ.

ಇಂದು ಅತ್ಯವಶ್ಯವಾಗಿರುವ, ಸಮಾನತೆಯ ಸಾಧನವಾಗಿರುವ ಕೆಲವು ಅಂಶಗಳು ಶತಮಾನಗಳ ನಂತರ ತಪ್ಪು ಎಂದು ಆಗಬಹುದು, ಭಾರತದ ವಿಭಜನೆಯ ಫಲಿತಾಂಶ ಕಾಲಕಾಲಕ್ಕೆ ಬದಲಾಗುತ್ತಿರಬಹುದು. ಇಂದಿನ ಹೀರೋ ನಾಳೆಯ ಖಳನಾಯಕನಾಗಬಹುದು,

.ಹೇಗೆ ಮನುವಾದ ಕೆಲಕಾಲ ಸಮಾಜವನ್ನು ಮುನ್ನಡೆಸಿ ಈಗ ಹೇಸಿಗೆ ಹುಟ್ಟಿಸುತ್ತಿದೆಯೋ, ದೇವರಿಗೆ ಸಮಾನರಂತಿದ್ದ ಪೂಜಾರಿಗಳು ಮುಲ್ಲಾಗಳು ಪಾದ್ರಿಗಳು ಈಗ ದಲ್ಲಾಳಿಗಳಂತೆಯೂ, ಜ್ಯೋತಿಷಿಗಳು ಬಫೂನ್ ಗಳಂತೆಯೂ, ಶೋಷಿತರು ಸ್ವಾಭಿಮಾನಿಗಳಂತೆಯೂ ಬಿಂಬಿತವಾಗುತ್ತಿಲ್ಲವೇ ಹಾಗೆ.

ಅದ್ದರಿಂದ ಇದು ದೇಶಕ್ಕೆ ಸ್ವಾತಂತ್ರ್ಯ ಕೊಡಿಸಲು ಶ್ರಮಿಸಿ, ವಿಶ್ವಕ್ಕೆ ಸರಳತೆ, ಅಹಿಂಸೆ, ಸತ್ಯ, ಪಾರದರ್ಶಕತೆ ನೀಡಿದ ಗಾಂಧಿ,

ಅದೇರೀತಿ ವ್ಯಕ್ತಿ ಸ್ವಾತಂತ್ರ್ಯವನ್ನು ಎತ್ತಿಹಿಡಿದು ಸಮಾನತೆ, ಮಾನವೀಯತೆಯನ್ನು ವಿಶ್ವಕ್ಕೆ ಪರಿಚಯಿಸಿದ, ಒಂದು ಇಡೀ ಜನಾಂಗವನ್ನು ತಲೆಎತ್ತಿ ಬದುಕುವಂತೆ ಮಾಡಿದ ಅಂಬೇಡ್ಕರ್ ಅವರನ್ನು ಎದುರು ಬದುರು ನಿಲ್ಲಿಸದೆ ಸಮಾನಾಂತರವಾಗಿ ನಿಲ್ಲಿಸೋಣ. ಕೆಲವರು, ಅದರಲ್ಲೂ ಕೆಲವು ಆಕ್ರೋಶಗೊಂಡ ದಲಿತ ಮನಸುಗಳು ಗಾಂಧಿಯನ್ನು ಕೊಂದ ಗೋಡ್ಸೆಯನ್ನು ಸಮರ್ಥಿಸುವುದು ಮೂಲಭೂತವಾದದ ಇನ್ನೊಂದು ಮುಖವಾಗುತ್ತದೆ. ಗಾಂಧಿಯವರ ವಿಶಾಲ ಮನೋಭಾವ ಪ್ರಾಯೋಗಿಕ ಅಲ್ಲದಿರಬಹುದು (ಮೀಸಲಾತಿಗೆ ಸಂಬಂಧಿಸಿದಂತೆ) ಅದಕ್ಕಾಗಿ ಅವರ ಒಳ್ಳೆಯ ಗುಣಗಳನ್ನು ದ್ವೇಷಿಸುವುದು ಸರಿಯಲ್ಲ. ನನ್ನ ಪ್ರಕಾರ ಇಬ್ಬರೂ ಮಹಾನ್ ವ್ಯಕ್ತಿಗಳು ಮತ್ತು ತಮ್ಮ ಗುರಿ ಸಾಧನೆಗಾಗಿ ಹೋರಾಡಿದ ಹಠವಾದಿಗಳು.

ಇದು ಚರ್ಚೆಯ ಒಂದು ಸರಳ ನಿರೂಪಣೆ ಅಷ್ಟೇ. ಹೇಳಲು ಇನ್ನೂ ಬಹಳಷ್ಟಿದೆ. ಚರ್ಚೆಗಳಿಗೆ ಮಿತಿಯಿಲ್ಲ. ಆದರೆ ಅನಿವಾರ್ಯವಾಗಿ ಇಂದಿನ ಪರಿಸ್ಥಿತಿಯನ್ನು ಗಮನಿಸಿ ಒಂದು ನಿರ್ಧಾರಕ್ಕೆ ಬರಬೇಕಾದ ಅನಿವಾರ್ಯತೆ ಇದೆ. ಇಲ್ಲದಿದ್ದರೆ ಘರ್ಷಣೆ ನಿರಂತರ.

ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಹುಟ್ಟುಹಬ್ಬದ ಶುಭಾಶಯಗಳೊಂದಿಗೆ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ. ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ –ಮತಗಳಲ್ಲಿ ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ.



■ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T